# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 34 | FRIDAY 10-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ನಿಮ್ಮ ಗೊಡ್ಡು ಬೆದರಿಕೆಗಳಿಗೆ ಬಗ್ಗಲ್ಲ: 'ಗ್ಯಾರಂಟಿ' ಲೆಕ್ಕ ಕೊಡಿ ಎಂದ ಚುನಾವಣೆ ಆಯೋಗ ವಿರುದ್ಧ ಸಿದ್ದರಾಮಯ್ಯ ಸಿಡಿಮಿಡಿ



ಬೆಂಗಳೂರು: ಗ್ಯಾರಂಟಿ ಯೋಜನೆಗಳ ಬಗ್ಗೆ ಚುನಾವಣಾ ಆಯೋಗ ವರದಿ ಕೇಳಿದ್ದು, ಇದರ ಬೆನ್ನಲ್ಲೇ ಆಯೋಗದ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಅಸಮಾಧಾನವನ್ನು ಹೊರಹಾಕಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ದಾವಣಗೆರೆ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ನಡೆಯುತ್ತಿರುವ ಉಪಚುನಾವಣೆಗಳ ಸಂದರ್ಭದಲ್ಲಿ ಭಾರತದ ಚುನಾವಣಾ ಆಯೋಗವು (ECI) ಕರ್ನಾಟಕ ಸರ್ಕಾರಕ್ಕೆ ಪತ್ರ ಬರೆದು, ರಾಜ್ಯದ ಗ್ಯಾರಂಟಿ ಯೋಜನೆಗಳಡಿ ಬಿಡುಗಡೆಯಾದ ನಿಧಿಗಳ ವಿವರಗಳನ್ನು ಕೇಳಿದೆ. ಆದರೆ, ನಮ್ಮ ಗ್ಯಾರಂಟಿ ಯೋಜನೆಗಳು ಈ ಉಪಚುನಾವಣೆ ಸಮಯದಲ್ಲಿ ಜಾರಿಯಾದವುಗಳಲ್ಲ ಎಂದು ಹೇಳಿದ್ದಾರೆ.

ಗ್ಯಾರಂಟಿ ಯೋಜನೆಗಳು 2023ರ ವಿಧಾನಸಭೆ ಚುನಾವಣೆಯಲ್ಲಿ ಜನರಿಗೆ ನೀಡಿದ ಭರವಸೆಗಳ ಭಾಗವಾಗಿ ನಮ್ಮ ಸರ್ಕಾರ ಅನುಷ್ಠಾನಕ್ಕೆ ತಂದಿರುವ ಕಾರ್ಯಕ್ರಮಗಳಾಗಿವೆ. ಈ ಯೋಜನೆಗಳಡಿ ರಾಜ್ಯದ ಎಲ್ಲ ಫಲಾನುಭವಿಗಳ ಖಾತೆಗಳಿಗೆ ನಿಯಮಿತವಾಗಿ, ಪಾರದರ್ಶಕವಾಗಿ ಹಣ ವರ್ಗಾವಣೆಯಾಗುತ್ತಿದೆ. ರಾಜ್ಯದ ಎಲ್ಲ ವರ್ಗದ ಜನರು ಘನತೆಯಿಂದ ಜೀವಿಸಲು ಮತ್ತು ಜೀವನ ನಿರ್ವಹಣೆಗೆ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸರ್ಕಾರವು ನೇರವಾಗಿ ಒದಗಿಸುತ್ತಿರುವ ಅನುದಾನವಾಗಿದೆ. ಈ ಯೋಜನೆಗಳು ಆಡಳಿತದ ಭಾಗವೇ ಹೊರತು, ಮತದಾರರನ್ನು ಸೆಳೆಯುವ ಕಾರ್ಯಕ್ರಮಗಳಲ್ಲ.

ಬಿಜೆಪಿಯು ಗ್ಯಾರಂಟಿ ಯೋಜನೆಗಳ ಬಗ್ಗೆ ಇಬ್ಬಗೆ ನೀತಿಯ ಧೋರಣೆಯನ್ನು ತಳೆದಿರುವುದು ಎಲ್ಲರಿಗೂ ಗೊತ್ತಿರುವ ವಿಚಾರ. ಒಂದು ಕಡೆ ಕರ್ನಾಟಕದ ಗ್ಯಾರಂಟಿ ಯೋಜನೆಗಳನ್ನು "ಬಿಟ್ಟಿ ಭಾಗ್ಯ" ಎಂದು ಅಪಹಾಸ್ಯ ಮಾಡುತ್ತಾರೆ. ಮತ್ತೊಂದು ಕಡೆ ಅದೇ ಯೋಜನೆಗಳನ್ನು ಅನುಕರಿಸಿ ತಾವು ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಜಾರಿಗೊಳಿಸುತ್ತಾರೆ. ಇದರಿಂದ ಕರ್ನಾಟಕದ ಮಾದರಿಯು ದೇಶಕ್ಕೆ ಪ್ರೇರಣೆಯಾಗಿದೆ ಎಂಬುದು ಸ್ಪಷ್ಟವಾಗುತ್ತದೆ.

ಆದರೆ, ಈ ವಿಚಾರವಾಗಿ ಚುನಾವಣಾ ಆಯೋಗ ಅನುಸರಿಸುತ್ತಿರುವ ನೀತಿಯು ಅನುಮಾನಸ್ಪದವಾಗಿದೆ. ಮಹಾರಾಷ್ಟ್ರ ಮತ್ತು ಬಿಹಾರದಂತಹ ರಾಜ್ಯಗಳಲ್ಲಿ ಚುನಾವಣೆಗೂ ಮುನ್ನ ನಗದು ವರ್ಗಾವಣೆ ಯೋಜನೆಗಳನ್ನು ಪ್ರಕಟಿಸಲಾಗಿದೆ ಮತ್ತು ಅಂತಹ ಯೋಜನೆಗಳ ಪ್ರಕ್ರಿಯೆಯನ್ನು ವೇಗಗೊಳಿಸಲಾಗಿದೆ. ಮತದಾರರಿಗೆ ನೇರವಾಗಿ ಯೋಜನೆಗಳ ಲಾಭವನ್ನು ವರ್ಗಾವಣೆ ಮಾಡಲಾಗಿದೆ. ಅವೆಲ್ಲವೂ ಬಹಿರಂಗವಾಗಿ ನಡೆದಿವೆ. ಆದರೂ ಚುನಾವಣಾ ಆಯೋಗ ಮೌನವಹಿಸಿತ್ತು, ಯಾವುದೇ ಪರಿಶೀಲನೆಗೆ ಒಳಪಡಿಸದೆ ಯೋಜನೆಗಳನ್ನು ಮುಂದುವರಿಸಲು ಅನುಮತಿ ನೀಡಿತ್ತು.

ಇದು ನಿಷ್ಪಕ್ಷಪಾತ ನಡೆಯಲ್ಲ, ಇದು ಒಂದು ಪಕ್ಷಕ್ಕೆ ನೀಡಿದ ಸಹಕಾರವಾಗಿದೆ. ಬಿಜೆಪಿ ಅಥವಾ ಎನ್‌ಡಿಎ ಸರ್ಕಾರಗಳು ಏನು ಮಾಡಿದರೂ ಚುನಾವಣಾ ಆಯೋಗ ಕಣ್ಣು ಮುಚ್ಚಿಕೊಂಡಿರುತ್ತದೆ. ಆದರೆ, ಕರ್ನಾಟಕ ಸರ್ಕಾರ ವಿಧಾನಸಭಾ ಚುನಾವಣೆ ಪೂರ್ವದಲ್ಲಿ ನೀಡಿದ್ದ ಭರವಸೆಗಳನ್ನು ಈಡೇರಿಸುತ್ತಿರುವಾಗ ಅದೇ ಆಯೋಗವು ಕ್ಯಾತೆ ತೆಗೆಯುತ್ತಿದೆ. ಈ ಇಬ್ಬಗೆಯ ನೀತಿಯು ಚುನಾವಣಾ ಆಯೋಗದ ಪಕ್ಷಪಾತವನ್ನು ಬಯಲು ಮಾಡುತ್ತದೆ ಎಂದು ಕಿಡಿಕಾರಿದ್ದಾರೆ.

ಕರ್ನಾಟಕದ ಗ್ಯಾರಂಟಿ ಯೋಜನೆಗಳನ್ನು ಗುರಿಯಾಗಿಸಿ ದಾಳಿ ಮಾಡುವುದು ಕೇವಲ ರಾಜಕೀಯ ಎಂದೆನಿಸುವುದಿಲ್ಲ  ಇದು ಬಡವರ ವಿರುದ್ಧ, ಮಹಿಳೆಯರ ವಿರುದ್ಧ ಮತ್ತು ಕರ್ನಾಟಕದ ವಿರುದ್ಧದ ಪರೋಕ್ಷ ದಾಳಿಯಾಗಿದೆ. ನುಡಿದಂತೆ ನಡೆವ ಸರ್ಕಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ನಮ್ಮ ಸರ್ಕಾರವು ಚುನಾವಣಾ ಆಯೋಗದ ಇಂತಹ ಗೊಡ್ಡು ಬೆದರಿಕೆಗಳಿಗೆ ಬಗ್ಗದೆ ತಾನು ಕೊಟ್ಟ ಭರವಸೆಗಳನ್ನು ಪೂರೈಸುವಲ್ಲಿ ಬದ್ಧವಾಗಿರುತ್ತದೆ ಮತ್ತು ಪ್ರತಿ ಕನ್ನಡಿಗನ ಸೇವೆಯನ್ನು ಎಂದಿನಂತೆ ಮುಂದುವರಿಸಲಿದೆ ಎಂದು ತಿಳಿಸಿದ್ದಾರೆ.

## ವೇದಿಕೆ ಸಜ್ಜಾಗಿದೆ, ಕೆಲವೇ ದಿನಗಳಲ್ಲಿ ಯತ್ನಾಳ್ ಬಿಜೆಪಿಗೆ ವಾಪಸ್: ಸಂಚಲನ ಸೃಷ್ಟಿಸಿದ ರಮೇಶ್ ಜಾರಕಿಹೊಳಿ ಹೇಳಿಕೆ



**ಬೆಳಗಾವಿ ವಾರ್ತೆ ಬೆಳಗಾವಿ:** ಬಿಜೆಪಿಯಿಂದ ಉಚ್ಚಾಟಿತರಾಗಿರುವ ಹಿರಿಯ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಕೆಲವೇ ದಿನಗಳಲ್ಲಿ ವಾಪಸ್ ಬಿಜೆಪಿಗೆ ಬರುತ್ತಾರೆ ಎಂದು ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಅವರು ಮಂಗಳವಾರ ಹೇಳಿದ್ದಾರೆ.

ಇಂದು ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಮೇಶ್ ಜಾರಕಿಹೊಳಿ, ಉಚ್ಚಾಟನೆಯಾದ ದಿನದಿಂದ ನಾನು ಯತ್ನಾಳ್ ಅವರನ್ನು ಮತ್ತೆ ಬಿಜೆಪಿಗೆ ಕರೆತರುವ ಪ್ರಯತ್ನ ಮಾಡುತ್ತಿದ್ದೇನೆ. ಈಗಾಗಲೇ ಒಂದು ವೇದಿಕೆ ಸಜ್ಜಾಗಿದೆ ಎಂದರು. ಬಾಗಲಕೋಟೆಯಲ್ಲಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರ ಯತ್ನಾಳ್ ಪ್ರಚಾರ ನಡೆಸಿದ್ದು ಒಳ್ಳೆಯ ಬೆಳವಣಿಗೆ. ಯತ್ನಾಳ್ ಪ್ರಚಾರದಿಂದ ನಮ್ಮ ಅಭ್ಯರ್ಥಿಗೆ ಲಾಭವಾಗಬಹುದು ಎಂದರು.

ಯತ್ನಾಳ್ ಬಿಜೆಪಿಗೆ ಬಂದರೆ ಒಳ್ಳೆಯದು. ಹಿಂದೂ ಸಂಘಟನೆ ಮತ್ತು ಬಿಜೆಪಿ ಮತ ಕ್ರೋಢಿಕರಣಕ್ಕೆ ಅನುಕೂಲವಾಗುತ್ತದೆ. ಉಪಚುನಾವಣೆಯಲ್ಲಿ ನಮ್ಮ ಪಕ್ಷದವರು ಒಳ್ಳೆಯ ರೀತಿಯಲ್ಲಿ ಕೆಲಸ ಮಾಡಿದ್ದು ಗೆಲ್ಲುವ ವಿಶ್ವಾಸ ಇದೆ ಎಂದರು.

## ಡಿಸಿಸಿ ಬ್ಯಾಂಕ್ ನಿರ್ದೇಶಕ ಅಮರನಾಥ ಜಾರಕಿಹೊಳಿ ಪ್ರಶಿಕ್ಷಣ ವರ್ಗದ ಕಾರ್ಯಕ್ರಮದಲ್ಲಿ ಭಾಗಿ



**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕಿನ ಅಂಕಲಗಿ ಪಟ್ಟಣದಲ್ಲಿ ಜರುಗಿದ ಭಾರತೀಯ ಜನತಾ ಪಾರ್ಟಿ ಪ್ರಶಿಕ್ಷಣ ಮಹಾಭಿಯಾನದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಅಮರನಾಥ ಜಾರಕಿಹೊಳಿ ಭಾಗವಹಿಸಿದ್ದು ವಿಶೇಷವಾಗಿತ್ತು.

ಅಂಕಲಗಿ ಪಟ್ಟಣದಲ್ಲಿ ಕಳೆದ ಮೂರು ದಿನಗಳಿಂದ ನಿರಂತರವಾಗಿ ನಡೆಯುವ ಪ್ರಶಿಕ್ಷಣ ಮಹಾಭಿಯಾನ ಕಾರ್ಯಕ್ರಮದಲ್ಲಿ ಪ್ರತಿ ದಿನ ಎರಡು ನೂರಕ್ಕೂ ಹೆಚ್ಚು ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದಾರೆ. ಬಿಜೆಪಿ ಪಕ್ಷದ ರಾಜ್ಯ ಮಟ್ಟದ ವಿವಿಧ ಪ್ರಚಾರಕರನ್ನು ಆಹ್ವಾನಿಸಿ ಪ್ರಶಿಕ್ಷಣಾರ್ಥಿಗಳಿಗೆ ಮಾಹಿತಿ ನೀಡಲಾಗುತ್ತದೆ.

## ಕವಿತೆಗಳು ಮಾನವನ ಭಾವನೆಗಳ ಪ್ರತಿಬಿಂಬವಾಗಿದ್ದು, ಸಮಾಜದ ಸತ್ಯವನ್ನು ಸೌಂದರ್ಯಪೂರ್ಣವಾಗಿ ವ್ಯಕ್ತಪಡಿಸುವ ಶಕ್ತಿ ಹೊಂದಿದೆ

**ಬೆಳಗಾವಿ ವಾರ್ತೆ ಮೂಡಲಗಿ:** ಕವಿತೆಗಳು ಮಾನವನ ಭಾವನೆಗಳ ಪ್ರತಿಬಿಂಬವಾಗಿದ್ದು, ಸಮಾಜದ ಸತ್ಯವನ್ನು ಸೌಂದರ್ಯಪೂರ್ಣವಾಗಿ ವ್ಯಕ್ತಪಡಿಸುವ ಶಕ್ತಿ ಹೊಂದಿದ್ದು, ಇಂದಿನ ಯುವಸಾಹಿತಿಗಳು ಕನ್ನಡ ಕಾವ್ಯ ಪರಂಪರೆಯನ್ನು ಅರಿತುಕೊಂಡು ಸೃಜನಶೀಲತೆಯನ್ನು ಬೆಳೆಸಿಕೊಳ್ಳಬೇಕು ಎಂದು ಹಿರಿಯ ಸಾಹಿತಿಗಳಾದ ಡಾ॥ ಗುರುದೇವಿ.ಹುಲೆಪ್ಪನ್ನವರಮಠರವರು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತು ಹಾಗು ಜ್ಞಾನದೀಪ್ತಿ ಸಾಹಿತ್ಯ ಪ್ರತಿಷ್ಠಾನ, ಮೂಡಲಗಿ ಇವುಗಳ ಸಹಯೋಗದಲ್ಲಿ ಪಟ್ಟಣದಲ್ಲಿನ ಚೈತನ್ಯ ವಸತಿ ಶಾಲೆಯಲ್ಲಿ ಜರುಗಿದ ಜಿಲ್ಲಾ ಮಟ್ಟದ ಕಾವ್ಯ ಕಮ್ಮಟ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಾವ್ಯದ ರೂಪ ,ಛಂದಸ್ಸು ,ಅಲಂಕಾರ , ಭಾವಸಂಪತ್ತು ಹಾಗೂ ನಾಡಿನ ಶ್ರೀಮಂತ ಕಾವ್ಯ ಪರಂಪರೆಯ ಕುರಿತು ಮುಖ್ಯ ಅತಿಥಿಗಳಾಗಿದ್ದ .ಬಿ .ಸಿ.ಹೆಬ್ಬಾಳರವರು ಮಾತನಾಡಿ, ಕಾವ್ಯವು ಮಾನವನ ಮನಸನ್ನು ಶುದ್ಧಗೊಳಿಸುವ ಪವಿತ್ರ ಸಾಧನವೆಂದು ಹೇಳಿದರು .

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಾಹಿತಿ ಶಿವಾನಂದ ಬೆಳಕೂಡ ಮಾತನಾಡಿ, ಕಾವ್ಯಕಮ್ಮಟಗಳು ಕನ್ನಡ ಸಾಹಿತ್ಯವನ್ನು ಜೀವಂತವಾಗಿಡುವ ಪವಿತ್ರ ವೇದಿಕೆಗಳಾಗಿವೆ ಎಂದರು.

ಕಾರ್ಯಕ್ರಮದ ಉದ್ಘಾಟಿಸಿದ ವಾಯ್.ಬಿ.ಪಾಟೀಲ, ಕ ಸಾ ಪ ಅಧ್ಯಕ್ಷ ಡಾ ॥ ಸಂಜಯ ಶಿಂಧಿಹಟ್ಟಿ ಮಾತನಾಡಿದರು. ಸುರೇಶ ಲಂಕೆಪ್ಪನ್ನವರ ಸ್ವಾಗತಿಸಿ ನಿರೂಪಿಸಿದರು ಬಿ . ಆರ್ . ತರಕಾರ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಸುಮಾರು 50 ಕ್ಕೂ ಹೆಚ್ಚು ಆಗಮಿಸಿದ್ದ ಕವಿಗಳಿಗೆ ಹಾಗೂ ಅತಿಥಿಗಳಿಗೆ ಸನ್ಮಾನಿಸಲಾಯಿತು



ಮೂಡಲಗಿ: ಪಟ್ಟಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಕಾವ್ಯ ಕಮ್ಮಟ ಕಾರ್ಯಕ್ರಮವನ್ನು ಬಿ.ವಾಯ್. ಪಾಟೀಲ ಉದ್ಘಾಟಿಸಿದರು.

ಸಮಾರಂಭ ದಲ್ಲಿ ಎಸ್.ಎಮ್.ಕಮದಾಳ, ಸಂಧ್ಯಾ ಪಾಟೀಲ, ಎ. ಎಚ್. ಒಂಟಗೋಡಿ , ಬಿ. ವಾಯ್.ಶಿವಾಪುರ ,ಮಹಾವೀರ ಸಲ್ಲಾಗೋಳ, ಬಿ.ಪಿ. ಬಂದಿ, ಮಹದೇವ ಜಿಡಿಮಣಿ ,ಸಿದ್ರಾಮ ದ್ಯಾಗಾನಟ್ಟಿ, ವಾಯ್.ಬಿ .ಕಳ್ಳಿಗುದ್ದಿ,ಬಿ.ಎಮ್. ನಂದಿ , ದುರ್ಗಪ್ಪ ದಾಸನ್ನವರ , ಚಿದಾನಂದ ಹುಗಾರ , ಶಶಿರೇಖಾ ಬೆಳ್ಳಕ್ಕಿ , ಭಾಗೀರತಿ ಕುಳಲಿ, ಶೈಲಜಾ ಬಡಿಗೇರ , ಗೋದಾವರಿ ದೇಶಪಾಂಡೆ ಮತ್ತಿತರರು ಉಪಸ್ಥಿತರಿದ್ದರು.

## ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯದ ಕೊಡುಗೆ ಅಪಾರ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರ:** ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯದ ಹಾಗೂ ಭಾಷೆ ಮತ್ತು ಭಾವನಾತ್ಮಕ ಸಂಬಂಧ ಬೆಳೆಸುವಲ್ಲಿ 12 ನೇ ಶತಮಾನದ ಬಸವಾದಿ ಶರಣರ ಕೊಡುಗೆ ಅಪಾರ ಎಂದು ಕಸಾಪ ಗೌರವ ಕಾರ್ಯದರ್ಶಿ ಮಂಜುನಾಥ ಕಳಸಣ್ಣವರ ಹೇಳಿದರು

ತಾಲೂಕಿನ ಬೈಲೂರ ಗ್ರಾಮದ ನಿಷ್ಕಲ ಮಂಟಪದ ಸಭಾಭವನದಲ್ಲಿ ಕಿನಾವಿವ ಸಂಘದ ಪದವಿ ಮಹಾವಿದ್ಯಾಲಯ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರದ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು, ಸಮಾಜದ ಕಟ್ಟಕಡೆಯ ವ್ಯಕ್ತಿಯು ಆಧ್ಯಾತ್ಮದ ಅರಿವನ್ನು ಪಡೆದುಕೊಳ್ಳಲು ವಚನ ಸಾಹಿತ್ಯ ಮಹತ್ತರ ಪಾತ್ರ ವಹಿಸಿದೆ ಎಂದರು.

ಸಮಾಜಸೇವಕ ಶಿವಾನಂದ ಹನುಮಸಾಗರ ಮಾತನಾಡಿ ಯುವ ಜನತೆಯಲ್ಲಿ ಸೇವಾ ಮನೋಭಾವನೆ ಬೆಳೆಸುವಲ್ಲಿ ಈ ಶಿಬಿರ ಪರಿಣಾಮಕಾರಿಯಾಗಲಿದೆ ಎಂದರು. ಗ್ರಾ ಪಂ ಸದಸ್ಯ ಸಂಗಮೇಶ ಹಿರೇಮಠ ಮಾತನಾಡಿದರು. ಪತ್ರಕರ್ತ ವಿವೇಕ ಕುರಗುಂದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಶಿಬಿರಾಧಿಕಾರಿ ಎಸ್ ವಿ ಹೊನ್ನರಾಜು ಹಾಗೂ ರವಿ ಅಗ್ನಿಹೋತ್ರಿ, ಗಂಗಾಧರ ಹನುಮಸಾಗರ, ಆನಂದ ಕರೆಪ್ಪನವರ, ವಿನಾಯಕ ಹುಬ್ಬಳ್ಳಿ, ಪ್ರಕಾಶ ಶಿವನವ್ವನವರ, ನಾಗೇಶ ಬೆಣ್ಣಿ, ವಿಜಯ ನೇಗಿನಹಾಳ ಹಾಗೂ ಇತರರಿದ್ದರು. ನಿರೂಪಣೆ ಕೀರ್ತಿ ಪಾಟೀಲ, ಸ್ವಾಗತ ಲಕ್ಷ್ಮೀ ಬಡಿಗೇರ, ಕೀರ್ತಿ ಚಿಕ್ಕಮಠ ವಂದಿಸಿದರು.

## ಶಿಸ್ತಿಗೆ ಇನ್ನೊಂದು ಹೆಸರೇ ಬಿಜೆಪಿ ಪಕ್ಷ: ದೇಶಪಾಂಡೆ



**ಬೆಳಗಾವಿ ವಾರ್ತೆ ಗೋಕಾಕ:** ಶಿಸ್ತಿಗೆ ಇನ್ನೊಂದು ಹೆಸರೇ ಬಿಜೆಪಿ ಪಕ್ಷವಾಗಿದೆ. ನಾವು ಮಾಡುವ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ನೋಡಿ ಜನ ನಮ್ಮನ್ನು ಗುರುತಿಸಬೇಕು.ಈ ನಿಟ್ಟಿನಲ್ಲಿ ನಾವು ಅಭಿವೃದ್ಧಿ ಕಾರ್ಯವನ್ನು ಮಾಡಬೇಕು ಎಂದು ಬೆಳಗಾವಿ ಜಿಲ್ಲಾ ಗ್ರಾಮಾಂತರ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂದೀಪ ದೇಶಪಾಂಡೆ ಹೇಳಿದರು.

ಅವರು ತಾಲೂಕಿನ ಅಂಕಲಗಿ ಪಟ್ಟಣದಲ್ಲಿ ಜರುಗಿದ ಭಾರತೀಯ ಜನತಾ ಪಾರ್ಟಿ ನಗರ ಮತ್ತು ಗ್ರಾಮೀಣ ಮಂಡಲ ಮಟ್ಟದ ಪ್ರಶಿಕ್ಷಣ ಮಹಾಭಿಯಾನದ ಮೂರನೇ ತಂಡದ ಪ್ರಶಿಕ್ಷಣ ವರ್ಗದ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಚುನಾವಣೆಯಲ್ಲಿ ಬೂತ್ ಮಟ್ಟವನ್ನು ಗೆಲ್ಲಿಸಿದರೆ,ಭಾರತ ದೇಶವೇ ಗೆದ್ದಂತೆ.ವ್ಯಕ್ತಿಗಿಂತ ಪಕ್ಷ ಮುಖ್ಯ, ಪಕ್ಷಗಿಂತ ದೇಶ ಮುಖ್ಯವಾಗಿದೆ ಎಂದು ಹೇಳಿದರು. ಸಮಾರಂಭವನ್ನು ಯುವ ಮುಖಂಡರು ಹಾಗೂ ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಅಮರನಾಥ ಜಾರಕಿಹೊಳಿ ಉದ್ಘಾಟಿಸಿದರು.

ಅಧ್ಯಕ್ಷತೆಯನ್ನು ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಸ ಪಾಟೀಲ ವಹಿಸಿದ್ದರು. ವೇದಿಕೆ ಮೇಲೆ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ಮಾಜಿ ಜಿ.ಪಂ ಸದಸ್ಯರುಗಳಾದ ಟಿ.ಆರ್.ಕಾಗಲ, ಮಡ್ಡೆಪ್ಪ ತೋಳಿನವರ, ಭೀಮಗೌಡ ಪೋಲಿಸ್ ಗೌಡರ, ಜಿಲ್ಲಾ ಕಾರ್ಯದರ್ಶಿ ಶಿವಾನಂದ ಹಣಮಸಾಗರ, ಜಿಲ್ಲಾ ಉಪಾಧ್ಯಕ್ಷ ಶಾಮಾನಂದ ಪೂಜೇರಿ, ರಾಷ್ಟ್ರೀಯ ಓಬಿಸಿ ಮೋರ್ಚಾ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಶಿ, ಬಿಜೆಪಿ ಹಿರಿಯ ಮುಖಂಡ ಪ್ರಮೋದ್ ಜೋಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ರಾಜೇಶ್ವರಿ ವಡೇಯರ ನಿರೂಪಿಸಿ, ವಂದಿಸಿದರು.

# ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಸಮಗ್ರ ಪ್ರಗತಿ ಪರಿಶೀಲನೆ
## ಶಿಕ್ಷಣ, ಆರೋಗ್ಯದಿಂದ ಯಾವುದೇ ಮಗು ವಂಚಿತವಾಗಬಾರದು ಯು. ನಿಸಾರ ಅಹಮದ್

**ಬೆಳಗಾವಿ ವಾರ್ತೆ ಗದಗ:** ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರು ಹಾಗೂ ಸಚಿವ ಸಂಪುಟ ದರ್ಜೆಯ ಸ್ಥಾನಮಾನ ಹೊಂದಿರುವ ಯು. ನಿಸಾರ ಅಹಮದ್ ಅವರ ಅಧ್ಯಕ್ಷತೆಯಲ್ಲಿ ಬುಧವಾರ ಜಿಲ್ಲಾಡಳಿತ ಭವನದಲ್ಲಿ ಪ್ರಧಾನ ಮಂತ್ರಿ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಜರುಗಿತು.



ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದ ಈ ಸಭೆಯಲ್ಲಿ, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಜಾರಿಗೊಂಡಿರುವ ಯೋಜನೆಗಳ ಅನುಷ್ಠಾನ, ಫಲಾನುಭವಿಗಳಿಗೆ ತಲುಪುವಿಕೆ, ಹಾಗೂ ಕಾರ್ಯಕ್ಷಮತೆ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಅಧ್ಯಕ್ಷ ಯು. ನಿಸಾರ ಅಹಮದ್ ಅವರು, ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ಪಡೆದ ಪ್ರತಿಯೊಂದು ಮಗು ಮುಂದಿನ ಹಂತವಾಗಿ ಸರ್ಕಾರಿ ಅಥವಾ ಖಾಸಗಿ ಶಾಲೆಗಳ 1ನೇ ತರಗತಿಗೆ ಸೇರ್ಪಡೆಯಾಗಿರುವುದನ್ನು ಸಂಬಂಧಿತ ಇಲಾಖೆ ಅಧಿಕಾರಿಗಳು ಖಚಿತಪಡಿಸಿಕೊಳ್ಳಬೇಕು ಎಂದು ಕಡ್ಡಾಯವಾಗಿ ಸೂಚಿಸಿದರು.

ಮಕ್ಕಳ ಶಿಕ್ಷಣದಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗಬಾರದು, ವಿಶೇಷವಾಗಿ ಅಲ್ಪಸಂಖ್ಯಾತ ಸಮುದಾಯದ ಮಕ್ಕಳು ಶಿಕ್ಷಣದಿಂದ ದೂರವಾಗದಂತೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗಬಾರದು ಎಂಬುದು ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಇದನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಶಾಲಾ ಶಿಕ್ಷಣ, ಪೌಷ್ಠಿಕ ಆಹಾರ, ವಿದ್ಯಾರ್ಥಿವೇತನ, ಆರೋಗ್ಯ ಸೇವೆಗಳು ಸೇರಿದಂತೆ ಸರ್ಕಾರ ನೀಡುವ ಸೌಲಭ್ಯಗಳು ಸಮರ್ಪಕವಾಗಿ ಮಕ್ಕಳಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಸರ್ಕಾರದ ವಿವಿಧ ಯೋಜನೆಗಳು ಕೇವಲ ಕಾಗದದಲ್ಲಿ ಮಾತ್ರ ಉಳಿಯದೆ, ನೆಲಮಟ್ಟದಲ್ಲಿ ಪರಿಣಾಮಕಾರಿಯಾಗಿ ಜಾರಿಯಾಗಬೇಕು. ಇದಕ್ಕಾಗಿ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು, ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಅರ್ಹ ಫಲಾನುಭವಿಗಳು ಯಾವುದೇ ಕಾರಣಕ್ಕೂ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಬಾರದು ಎಂದು ವಿಶೇಷವಾಗಿ ಎಚ್ಚರಿಸಿದರು.

ಗದಗ ಜಿಲ್ಲೆಯು ಕೋಮು ಸೌಹಾರ್ದತೆಗೆ ಹೆಸರುವಾಸಿಯಾಗಿದ್ದು, ಎಲ್ಲ ಸಮುದಾಯಗಳು ಪರಸ್ಪರ ಸಹಕಾರದಿಂದ ಬದುಕುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ತಮ್ಮ ಪೊಲೀಸ್ ವೃತ್ತಿ ಜೀವನದ ಆರಂಭವನ್ನು ಗದಗ ಜಿಲ್ಲೆಯ ನರಗುಂದದಲ್ಲಿ ಮಾಡಿದುದನ್ನು ಸ್ಮರಿಸಿದ ಅವರು, ಪೊಲೀಸ್ ಇಲಾಖೆಯು ಸಮಾಜದಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಸಮಾಜದಲ್ಲಿ ಶಾಂತಿ ನೆಲೆಸಲು ಪೊಲೀಸ್ ಇಲಾಖೆ ಇನ್ನಷ್ಟು ಚುರುಕಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ವರದಿಗಳನ್ನು ಪರಿಶೀಲಿಸಿ, ಕಾರ್ಯನಿರ್ವಹಣೆಯ ಗುಣಮಟ್ಟವನ್ನು ಹೆಚ್ಚಿಸುವುದು, ಗುರಿ ಸಾಧನೆಗೆ ವೇಗ ನೀಡುವುದು, ಹಾಗೂ ಜನಸಾಮಾನ್ಯರಿಗೆ ಹೆಚ್ಚಿನ ಪ್ರಯೋಜನವಾಗುವಂತೆ ಯೋಜನೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಅವರು ಸೂಕ್ತ ಮಾರ್ಗದರ್ಶನ ನೀಡಿದರು.

ಕೊಳಗೇರಿ ಅಭಿವೃದ್ಧಿ ನಿಗಮದಿಂದ ಮನೆ ನಿರ್ಮಿಸಿ ಕೊಟ್ಟ ಮಾಹಿತಿ ನೀಡಿ, ಹಾಗೂ ಕಾರ್ಮಿಕ ಇಲಾಖೆಯಲ್ಲಿ ನೊಂದಣಿ ಇರುವ ಕಾರ್ಮಿಕರ ವಿವರ ಅವರಿಗೆ ನೀಡಿದ ಸೌಲಭ್ಯಗಳ ವಿವರ ನೀಡುವಂತೆ ತಿಳಿಸಿದರು. ಆರೋಗ್ಯ ಇಲಾಖೆಯಿಂದ ವಹಿಸಿದ ಕ್ರಮಗಳ ಮಾಹಿತಿ ಪಡೆದರು.

ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ನೀಡಿದ ಸೌಲಭ್ಯಗಳ ಮಾಹಿತಿಯನ್ನು ಪಡೆದು, ಹೆಚ್ಚು ಹೆಚ್ಚು ಅನುಕೂಲ ಮಾಡುವಂತೆ ತಿಳಿಸಿದರು. ಜರ್ಮನ್ ಸೇರಿದಂತೆ ಇತರೆ ವಿದೇಶಕ್ಕೆ ಕೆಲಸಕ್ಕೆ ಕಳಿಸಲು ಲಿಪ್ಟ್ ತರಬೇತಿ ನೀಡಿ ಕಳುಹಿಸಲು ಸೂಚಿಸಿದರು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ಶಾಲಾ ಕಾಲೇಜು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕರಿಯರ್ ಗೈಡನ್ಸ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು. ಅರ್ಹ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ವಿವಿಧ ಇಲಾಖೆಗಳಿಂದ ಇರುವ ಸೌಲಭ್ಯಗಳನ್ನು ವಿಳಂಬವಿಲ್ಲದೇ ದೊರಕಿಸುವಲ್ಲಿ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ತಮ್ಮ ಇಲಾಖೆಗಳ ಪ್ರಗತಿ ವಿವರಗಳನ್ನು ಕೆಳಗಿನಂತೆ ವಿವರಿಸಿದರು.

ಶಾಲಾ ಶಿಕ್ಷಣ ಇಲಾಖೆಯಿಂದ ಏಪ್ರಿಲ್ 2025 ರಿಂದ ಮಾರ್ಚ 2026 ರ ಅಂತ್ಯದವರೆಗೆ ಸಮವಸ್ತ್ರ ಮತ್ತು ಶೂ ಮತ್ತು ಸಾಕ್ಸ್ ಯೋಜನೆಯಡಿ 14794 ಫಲಾನುಭವಿಗಳು ಸೌಲಭ್ಯ ಪಡೆದಿರುತ್ತಾರೆ. ಅಕ್ಷರ ದಾಸೋಹ ಮತ್ತು ಕ್ಷೀರ ಭಾಗ್ಯ ಯೋಜನೆಯಡಿ 19128 ಫಲಾನುಭವಿಗಳು ಸೌಲಭ್ಯ ಪಡೆದಿರುತ್ತಾರೆ. ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಏಪ್ರಿಲ್ 2025 ರಿಂದ ಮಾರ್ಚ 2026 ರ ಅಂತ್ಯದವರೆಗೆ 5187 ಲಕ್ಷ ರೂ. ವೆಚ್ಚ ಮಾಡಲಾಗಿದ್ದು 798 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿರುತ್ತಾರೆ. ಪ್ರಸಕ್ತ ಉದ್ಯೋಗ ಮೇಳದಲ್ಲಿ 8 ಜನ ಅಲ್ಪಸಂಖ್ಯಾತರಿಗೆ ಉದ್ಯೋಗ ಪಡೆದಿರುತ್ತಾರೆ ಎಂದು ಸಭೆಗೆ ಮಾಹಿತಿ ತಿಳಿಸಿದರು.

ಸಭೆಯ ಅಂತ್ಯದಲ್ಲಿ, ಯೋಜನೆಗಳ ಅನುಷ್ಠಾನದಲ್ಲಿ ಸಮನ್ವಯತೆ ಸಾಧಿಸಿ, ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಎಸ್.ಎಸ್.ನೀಲಗುಂದ, ಓಎಸ್ ಡಿ ಚೇರಮಮನ್ ಮುಜಾಬುಲ್ಲಾ ಜಾಫರಿ ಸೇರಿದಂತೆ ವಿವಿಧ ಇಲಾಖೆ ಅದಿಕಾರಿಗಳು ಹಾಜರಿದ್ದರು.

# ಜಯ ಮೃತ್ಯುಂಜಯ ಶ್ರೀಗಳ ತೇಜೋವದೆ ಮಾಡಲು ಸರಕಾರ ಷಡ್ಯಂತ್ರ ನಡೆಸುತ್ತಿದೆ




**ಬೆಳಗಾವಿ ವಾರ್ತೆ ಗದಗ :** ಅಪರಿಚಿತ ವ್ಯಕ್ತಿಗಳು ನೀಡಿದ ದೂರಿನ ಮೇಲೆ ಕೂಡಲಸಂಗಮದ ಪಂಚಮಸಾಲಿ ಪೀಠದ ಪೂಜ್ಯಶ್ರೀ ಜಯಮೃತ್ಯುಂಜಯ ಶ್ರೀಗಳನ್ನು ತೋಜೋವದೆ ಮಾಡಲು ಸರಕಾರ ಪ್ರಯತ್ನ ಮಾಡುತ್ತಿದೆ ಎಂದು ಪಂಚಮಸಾಲಿ ಯುವ ಘಟಕದ ಜಿಲ್ಲಾಧ್ಯಕ್ಷ ಅಯ್ಯಪ್ಪ ಅಂಗಡಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಮಹಿಳಾ ಆಯೋಗವು ಅಪರಿಚಿತ ಮಹಿಳೆ ದೂರು ನೀಡಿದ ತಕ್ಷಣ ವಿಚಾರಣೆ ಮಾಡದೆ ಶ್ರೀಗಳ ವಿರುದ್ಧ ಕ್ರಮ ಕೈಗೊಂಡಿರುವುದು ಖಂಡನೀಯವಾಗಿದೆ ಇಡಿ ಪಂಚಮಸಾಲಿ ಸಮಾಜದ ಗುರುಗಳಾದ ಪೂಜ್ಯಶ್ರೀ ಜಯಮೃತ್ಯುಂಜಯ ಶ್ರೀಗಳನ್ನು ಅವಮಾನಿಸಿರುವುದು ಸರಿಯಲ್ಲ. ಪಂಚಮಸಾಲಿ ಸಮಾಜವನ್ನು 2 ಎ ಮೀಸಲಾತಿಗಾಗಿ ಹೋರಾಟ ಮಾಡುತ್ತಿರುವ ಶ್ರೀಗಳನ್ನು ಹತ್ತಿಕ್ಕುವ ಪ್ರಯತ್ನವನ್ನು ಸರಕಾರ ಮತ್ತು ಸಮಾಜದ ಕೆಲವರು ಮಾಡುತ್ತಿದ್ದಾರೆ. ಶ್ರೀಗಳ ಮೇಲೆ ಈ ಹಿಂದೆ ಹಲ್ಲೆ ಮಾಡಿದವರೇ ಈಗ ಶ್ರೀಗಳ ವಿರುದ್ದ ಆರೋಪ ಮಾಡುತ್ತಿದ್ದಾರೆ. ಇದರಿಂದ ಯಾರಿದ್ದಾರೆ ಎಂದು ತನಿಖೆಯಿಂದ ತಿಳಿದು ಬರಲಿದೆ. ಗುರುಗಳ ವಿರುದ್ದ ಷಡ್ಯಂತ್ರ ಮಾಡಿದವರ ವಿರುದ್ದ ಮುಂದಿನ ದಿನಗಳಲ್ಲಿ ತಕ್ಕಪಠ ಕಲಿಸುತ್ತೆವೆ ಎಂದು ಹೇಳಿದರು.

ಬಸವರಾಜ ಮನಗುಂಡಿ ಅವರು ಮಾತನಾಡಿ, ಪಂಚಮಸಾಲಿ ಸಮಾಜವನ್ನು ರಾಜಕಾರಣಿಗಳ ಕಪಿಮುಷ್ಠಿಯಿಂದ ಬಿಡುಗಡೆ ಮಾಡಿದ್ದಕ್ಕೆ ಶ್ರೀಗಳ ಮೇಲೆ ಅಪಾಧನೆ ಮಾಡಿ ಅವರ ವಿರುದ್ದ ಸರಕಾರ ಷಡ್ಯಂತ್ರ ನಡೆಸಿ ಸಮಾಜವನ್ನು ತುಳಿಯುವ ಪ್ರಯತ್ನ ಮಾಡುತ್ತಿದೆ. ತಪ್ಪು ಯಾರೇ ಮಾಡಿರಲಿ ಸರಕಾರ ಕೂಡಲೆ ಕ್ರಮ ಕೈಗೊಂಡು ತಪ್ಪಿತಸ್ಥರಿಗೆ ಶಿಕ್ಷೆ ನೀಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಸಮಾಜದಿಂದ ಬೃಹತ್ ಪ್ರತಿಬಟನೆ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಈ ಸುದ್ದಿಗೋಷ್ಠಿಯಲ್ಲಿ ಮಹೇಶ ಕರಬಿಷ್ಠಿ, ಶರಣಪ್ಪ ಗೊಳಗೊಳಕಿ,ಈರಣ್ಣ ಬಾಲಿಕಾಯಿ, ರಮೇಶ ರೋಣದ, ಮಹೇಶ ಆದಿ, ಕುಮಾರ ಹೊಂಬಳ, ಮಲ್ಲಿಕಾರ್ಜುನ ಕಿರೇಸೂರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

ಗದಗ : ಈ ಮೂಲಕ ಯಾವತ್ತೂ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಸರಕಾರದ ಮಾರ್ಗಸೂಚಿಯಂತೆ 2026-27ನೇ ಸಾಲಿನ ಎಸ್.ಎಫ್.ಸಿ. 5%, 7.25% ಹಾಗೂ ಸಾಮಾನ್ಯನಿಧಿ ಶೇ.24.10% ಹಾಗೂ ಶೇ.5%, 7.25% ಘಟಕದ ವೈಯಕ್ತಿಕ ಕಾರ್ಯಕ್ರಮದಡಿ ಅನುದಾನವನ್ನು ಕಾಯ್ದಿರಿಸಲಾಗಿದ್ದು ಈ ಅನುದಾನಕ್ಕನುಗುಣವಾಗಿ ಕಾರ್ಯಕ್ರಮಗಳಿಗೆ ವೈಯಕ್ತಿಕ ಸವಲತ್ತುಗಳನ್ನು ಪಡೆಯಲು ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ದಿನಾಂಕ: 16-04-2026 ಸಾಯಂಕಾಲ 5-00 ಗಂಟೆಯೊಳಗಾಗಿ ಭರ್ತಿ ಮಾಡಿದ ನಮೂನೆಯೊಂದಿಗೆ ಅವಶ್ಯಕ ಧೃಡೀಕರಿಸಿದ ದಾಖಲೆಗಳೊಂದಿಗೆ ಅರ್ಜಿಯನ್ನು ಮುಳಗುಂದ ಪಟ್ಟಣ ಪಂಚಾಯತ ಕಾರ್ಯಾಲಯದಲ್ಲಿ ಸಲ್ಲಿಸಿ ಸ್ವೀಕೃತಿಯನ್ನು ಪಡೆಯಬಹುದಾಗಿದೆ. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯ ಸಂಪರ್ಕಿಸಬಹುದಾಗಿದೆ.

# ವಿದೇಶಗಳಲ್ಲಿ ಶರಣ ತತ್ವಗಳು ಪಸರಿಸಿದರೆ ಯುದ್ಧಗಳು ನಡೆಯುತ್ತಿರಲಿಲ್ಲ



ತೋಂಟದಾರ್ಯ ಮಠದಲ್ಲಿ ಸೋಮವಾರ ಜರುಗಿದ ಕಾರ್ಯಕ್ರಮದಲ್ಲಿ 2024 ನೇ ಸಾಲಿನ ರಾಜ್ಯಮಟ್ಟದ ತನಿಖಾ ವರದಿ ಪ್ರಶಸ್ತಿಗೆ ಭಾಜನರಾದ ಪತ್ರಕರ್ತ ಶಿವಾನಂದ ಹಿರೇಮಠ ಅವರನ್ನಿ ಸನ್ಮಾನಿಸಲಾಯಿತು. ಸಿದ್ದರಾಮ ಶ್ರೀಗಳು, ಎಸ್. ಎಸ್. ಪಾಟೀಲ, ವಿನಾಯಕ ಮಾನ್ವಿ, ಐ.ಬಿ.ಬೆನಕೊಪ್ಪ, ಬಾಲಚಂದ್ರ ಬರಮಗೌಡರ, ಡಾ. ಉಮೇಶ ಪುರದ ಇತರರು ಇದ್ದರು.

**ಬೆಳಗಾವಿ ವಾರ್ತೆ ಗದಗ ;** ಪಾಶ್ಚಾತ್ಯ ದೇಶಗಳಿಗೆ ಶರಣ ತತ್ವಗಳು ಪಸರಿಸಬೇಕು. ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ದೇಶಗಳಲ್ಲಿ ಶರಣ ತತ್ವಗಳು ಪಸರಿಸಿದರೆ ಯುದ್ಧಗಳು ನಡೆಯುತ್ತಿರಲಿಲ್ಲ ಎಂದು ತೋಂಟದಾ ರ್ಯ ಮಠದ ಸಿದ್ಧರಾಮ ಶ್ರೀಗಳು ಹೇಳಿದರು.

ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಸೋಮವಾರ ಏರ್ಪಡಿಸಿದ್ದ ಲಿಂಗಾಯತ ಪ್ರಗತಿಶೀಲ ಸಂಘದ ನೂತನ ಪದಾಧಿಕಾರಿಗಳಿಗೆ ಸೇವಾ ಹಸ್ತಾಂತರ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿ, ಬಸವಾದಿ ಶರಣರು ಮತ್ತು ಅವರ ವಚನಗಳಲ್ಲಿ ಶಾಂತಿ, ಬದುಕು, ಪರಸ್ಪರ ಗೌರವ, ಮಾನವೀಯ ಮೌಲ್ಯಗಳನ್ನು ತಿಳಿಸಿದ್ದಾರೆ. ನಾನು ಎನ್ನುವ ಬದಲಾಗಿ ನಾವು ಎನ್ನುವುದನ್ನು ಕಲಿಸಿದ್ದಾರೆ. ಸಕಲ ಜೀವಿಗಳ ಕ್ಷೇಮ ಬಯಸಿದ್ದಾರೆ. ಇಂತಹ ಶರಣ ತತ್ವಗಳು ಪಾಶ್ಚಾತ್ಯ ರಾಷ್ಟ್ರಗಳಲ್ಲಿ ಪಸರಿಸಿದ್ದರೆ ಇಂದು ಯುದ್ಧಗಳು ನಡೆಯುತ್ತಿರಲಿಲ್ಲ. ಯುದ್ದವನ್ನು ಕೈಬಿಟ್ಟು ಮಾನವೀಯವ ಮೌಲ್ಯಗಳಿಗೆ ಬೆಲೆ ಕೊಡಬೇಕು ಎಂದು ನಾನು ಯುದ್ದೋನ್ಮಾದ ದೇಶಗಳಿಗೆ ಮನವಿ ಮಾಡುತ್ತೇನೆ ಎಂದರು.

ಮಠದಲ್ಲಿ ಪ್ರತಿ ಸೋಮವಾರ ಮಠದಲ್ಲಿ ಜರಗುವ ಶಿವಾನುಭವ ಕಾರ್ಯಕ್ರಮ ಗಿನ್ನಿಸ್ ದಾಖಲೆ ಪುಸ್ತಕ ಸೇರ್ಪಡೆಗೆ ಅರ್ಹತೆ ಹೊಂದಿದೆ. ರಾಜ್ಯದ ಅನೇಕ ಮಠಗಳು ಶಿವಾನುಭ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸದೇ ಅರ್ಧಕ್ಕೆ ಕೈಬಿಟ್ಟ ಉದಾಹರಣೆಗಳು ಇವೆ. ಆದರೆ ಕಳೆದ 54 ವರ್ಷಗಳಿಂದ ತೋಂಟದಾರ್ಯ ಮಠದಲ್ಲಿ ನಿರಂತರ ಶಿವಾನುಭ ಕಾರ್ಯಕ್ರಮ ನಡೆದು ಕೊಂಡು ಬಂದಿದೆ. ಇಲ್ಲಿ ವೇದಿಕೆ ಮೇಲೆ ಸನ್ಮಾನಿತರು, ಉಪನ್ಯಾಸ ನೀಡಿದವರು ಭವಿಷ್ಯದಲ್ಲಿ ಉಜ್ವಲ ಭವಿಷ್ಯ ಕಂಡಿದ್ದಾರೆ. ಶಿವಾನುಭ ಕಾರ್ಯಕ್ರಮವನ್ನು ಒಂದು ವರ್ಷಗಳ ಕಾಲ ನಡೆಸಿಕೊಂಡು ಬಂದ ಸಮಿತಿ ಅಧ್ಯಕ್ಷ ಬಾಲಚಂದದ್ರ ಬರಮಗೌಡರ ಮತ್ತು ಸಮಿತಿ ಸದಸ್ಯರಿಗೆ ಅಭಿನಂದನೆಗಳು. ಜತೆಗೆ 2026 27 ನೇ ಸಾಲಿನಲ್ಲಿ ಸಮಿತಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಡಾ. ಉಮೇಶ ಪುರದ ಅವರ ಸೇವೆಯೂ ನಿರಾತಂಕವಾಗಿ ನಡೆಯುತ್ತದೆ ಎಂಬ ಭರವಸೆ ಇದೆ ಎಂದು ಸಿದ್ಧರಾಮ ಶ್ರೀಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಪ್ರಸಕ್ತ ಸಾಲಿನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಡಾ. ಉಮೇಶ ಪುರದ ಮಾತನಾಡಿ, ಮಠದ ಹಲವಾರು ಕಾರ್ಯಕಮಗಳಲ್ಲಿ ಸೇವೆ ಸಲ್ಲಿಸಿದ್ದೇನೆ. ನನಗೆ ಈ ವರ್ಷ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದು ಹೆಮ್ಮೆ ಅನಿಸುತ್ತದೆ. ಲಿಂಗಾಯತ ಪ್ರಗತಿಶೀಲ ಸಂಘವು ರಾಜ್ಯೋತ್ಸವ ಪ್ರಶಸ್ತಿ ವಿಜೇತ ಸಂಘವಾಗಿದೆ. ಲಿಂಗೈಕ್ಯ ಸಿದ್ಧಲಿಂಗ ಶ್ರೀಗಳು ಪೀಠಾಧಿಪತಿ ಆಗಲು ಸಹ ಲಿಂಗಾಯತ ಪ್ರಗತಿಶೀಲ ಸಂಘವೇ ಮುಖ್ಯ ಕಾರಣವಾಗಿತ್ತು ಎಂದರು.

ಸಂಘದ ನಿಕಟಪೂರ್ವ ಅಧ್ಯಕ್ಷ ಬಾಲಚಂದ್ರ ಬರಮಗೌಡರ ಮಾತನಾಡಿ, ಸಂಘದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಾಗ ಹಲವು ಜವಾಬ್ದಾರಿಗಳು ಇದ್ದವು. ಶ್ರೀಗಳ ಆಶೀರ್ವಾದದಿಂದ ಎಲ್ಲವನ್ನು ನಿಭಾಯಿಸಲಾಯಿತು. ಮುಂದೆಯೂ ಸಹಕಾರ ನೀಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಸಂಘದ ನೂತನ ಸದಸ್ಯರನ್ನು, ಪತ್ರಕರ್ತ ಶಿವಾನಂದ ಹಿರೇಮಠ ಸೇರಿದಂತೆ ಸಾಧಕರನ್ನು ಸನ್ಮಾನಿಸಲಾಯಿತು.

ಮಾಜಿ ಸಚಿವ ಎಸ್. ಎಸ್. ಪಾಟೀಲ, ಐ.ಬಿ.ಬೆನಕೊಪ್ಪ, ವಿನಾಯಕ ಮಾನ್ವಿ, ಎಸ್.ಎಸ್. ಪಟ್ಟಣಶೆಟ್ಟರ, ಕೊಟ್ರೇಶ ಮೆಣಸಿನಕಾಯಿ ಸೇರಿದಂತೆ ಇತರರು ಇದ್ದರು.

# ಬೆಂಬಲ ಬೆಲೆ ಯೋಜನೆಯಡಿ ಎಫ್ಎಕ್ಯೂ ಗುಣಮಟ್ಟದ ಕುಸುಬೆ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

**ಬೆಳಗಾವಿ ವಾರ್ತೆ ಗದಗ:** 2026 ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.



ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಮಂಗಳವಾರ 2026 ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕುಸುಬೆ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 05 ಕ್ವಿಂಟಲ್‌ನಂತೆ ಗರಿಷ್ಠ 20 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಖರೀದಿಸಲು ಹಾಗೂ ಕುಸುಬೆ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಕುಸುಬೆ ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಸುಧಾ ಆರ್ ಬಂಡಿ ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೇ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 6540 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರಗೆ ನಿಗದಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಿ ಕೇಂದ್ರದಿಂದ ಎನ್.ಸಿ.ಸಿ.ಎಫ್ ಹಾಗೂ ರಾಜ್ಯದಲ್ಲಿ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆ.ಓ.ಎಫ್) ಬೆಂಗಳೂರು ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## 13 ಖರೀದಿ ಕೇಂದ್ರ:

ಗದಗ ತಾಲೂಕು : OGCS : ಮುಳಗುಂದ ,ಬಳಗಾನೂರ,ಹೊಂಬಳ,
ನರಗುಂದ : OGCS :ಕಣಕಿಕೊಪ್ಪ
ಶಿರಹಟ್ಟಿ : OGCS: ರಣತೂರ
ಲಕ್ಷ್ಮೇಶ್ವರ : OGCS : ಶಿಗ್ಲಿ
ರೋಣ : OGCS : ಅಬ್ಬಗೇರಿ,
ಮೆ.ಕಿಸಾನ ಅಬಿವೃದ್ಧಿ ತೋಟಗಾರಿಕೆ ರೈತ ಉತ್ಪಾದಕರ ಕಂಪನಿ ಮಾಡಲಗೇರಿ
ಗಜೇಂದ್ರಗಡ : ಟಿಎಪಿಸಿಎಂಎಸ್ ನರಗಲ್,OGCS ನಿಡಗುಂದಿ,
ಮೆ.ನರೇಗಲ್ ರೈತ ಸಮೃದ್ದಿ ತೋಟಗಾರಿಕಾ ಉತ್ಪಾದಕರ ಕಂಪನಿ,ನರೆಗಲ್
ಮುಂಡರಗಿ : OGCS ಬರದೂರ, ಪೇಠಲೂರ

# ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ
## ಗದಗ-ಬೆಟಗೇರಿ ಸಂಸ್ಥೆಯ 2025-26 ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮ

ಗದಗ: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಸಂಸ್ಥೆಯ 2025-26 ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ದಿನಾಂಕ: 07-04-2026 ರಂದು ಸಂಸ್ಥೆಯಲ್ಲಿ ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಜರುಗಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿ.ಎನ್.ಟಿ.ಟಿ.ಎಫ್ ಅಧ್ಯಕ್ಷರಾದ ಕೆ.ಹೆಚ್.ಪಾಟೀಲ್, ಜ್ಯೋತಿ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಶಿಕ್ಷಣ, ಕೌಶಲ್ಯ ಚಟುವಟಿಕೆಗಳು, ವಿನ್ಯಾಸ ಮತ್ತು ಸ್ವ-ಉದ್ಯೋಗದ ಕುರಿತು ವಿದ್ಯಾರ್ಥಿಗಳಿಗೆ ಸಲಹೆಗಳನ್ನು ಅವರು ನೀಡಿದರು.

ಸಂಸ್ಥೆಯ ಜಂಟಿ ನಿರ್ದೇಶಕರು/ ಪ್ರಾಂಶುಪಾಲರಾದ ಶ್ರೀಮತಿ ಸುಮಲತ.ಡಿ. ಅವರು ವಾರ್ಷಿಕ ವರದಿಯನ್ನು ಓದಿ ಸಂಸ್ಥೆಯ ಸಾಧನೆಗಳನ್ನು ವಿವರಿಸಿದರು.

ಶೈಕ್ಷಣಿಕ, ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಮುಖ್ಯ ಅತಿಥಿಗಳು ಬಹುಮಾನ ಮತ್ತು ಪ್ರಶಸ್ತಿಗಳನ್ನು ವಿತರಿಸಿದರು.



ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿದವು. ವಿದ್ಯಾರ್ಥಿಗಳು ಪ್ರದರ್ಶಿಸಿದ ಜಾನಪದ ನೃತ್ಯ, ದೇಶಭಕ್ತಿ ಗೀತೆ, ನಾಟಕಗಳು ಕಾರ್ಯಕ್ರಮದ ಮೆರುಗು ಹೆಚ್ಚಿಸಿದವು .

ಈ ಸಂದರ್ಭದಲ್ಲಿ ಶ್ರೀಮತಿ ಅನುಪಮಾ ಹಿರೇಮಠ, ಉಪ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಹುಬ್ಬಳ್ಳಿ ಹಾಗೂ ಕುಮಾರಿ.ರಕ್ಷಿತಾ ಮಾಲಿಪಾಟೀಲ್, ವಿದ್ಯಾರ್ಥಿಗಳ ಕಾರ್ಯದರ್ಶಿ ಹಾಗೂ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಮತ್ತು ಸಂಸ್ಥೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬೇಸಿಗೆ ತೀವ್ರತೆ ಹೆಚ್ಚಳ: ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ತಡೆಯಲು ತುರ್ತು ಕ್ರಮಕ್ಕೆ ಕಟ್ಟುನಿಟ್ಟಿನ ಸೂಚನೆ



**ಬೆಳಗಾವಿ ವಾರ್ತೆ ರೋಣ :** ಬೇಸಿಗೆ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈಗಿನಿಂದಲೇ ಪೂರ್ವ ಸಿದ್ಧತೆ ಕೈಗೊಳ್ಳುವುದು ಅತ್ಯಂತ ಅಗತ್ಯ. ಜನರಿಗೆ ಕುಡಿಯುವ ನೀರಿನ ತೊಂದರೆ ಎದುರಾಗುವ ಪರಿಸ್ಥಿತಿ ಬರಬಾರದು" ಎಂದು ರೋಣ ತಾಲೂಕ ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿಗಳು ಹೇಳಿದರು..

ರೋಣ ತಾಲೂಕ ಪಂಚಾಯತ ಸಭಾ ಭವನದಲ್ಲಿ ಇಂದು ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಮಹತ್ವದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಬೇಸಿಗೆ ಹಂಗಾಮಿನ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಪ್ರಮುಖ ಚರ್ಚೆಯ ವಿಷಯವಾಗಿ ಹೊರಹೊಮ್ಮಿತು. ರೋಣ ಹಾಗೂ ಗಜೇಂದ್ರಗಡ ತಾಲೂಕಗಳ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ನೀರಿನ ಕೊರತೆಯನ್ನು ಗಂಭೀರವಾಗಿ ಪರಿಗಣಿಸಿ, ಯಾವುದೇ ಗ್ರಾಮದಲ್ಲಿಯೂ ಕುಡಿಯುವ ನೀರಿನ ಅಭಾವ ಉಂಟಾಗದಂತೆ ತಕ್ಷಣ ಮತ್ತು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಮಾತನಾಡಿದ ಕಾರ್ಯನಿರ್ವಾಹಕ ಅಧಿಕಾರಿಗಳು, " ಹಾಳಾಗಿರುವ ಬೋರ್‌ವೆಲ್‌ಗಳನ್ನು ತ್ವರಿತವಾಗಿ ದುರಸ್ತಿ ಮಾಡುವುದು, ಅಗತ್ಯವಿರುವ ಕಡೆಗಳಲ್ಲಿ ಹೊಸ ಬೋರ್‌ವೆಲ್‌ಗಳ ತೋಡಿಕೆ, ಕುಡಿಯುವ ನೀರಿನ ಟ್ಯಾಂಕರ್‌ಗಳನ್ನು ಸಿದ್ಧವಾಗಿಡುವುದು ಹಾಗೂ ನೀರಿನ ಸಂಗ್ರಹಣೆ ಮತ್ತು ವಿತರಣೆ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ನಿರ್ದೇಶನ ನೀಡಲಾಯಿತು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತ ಮಟ್ಟದಲ್ಲಿ ನೀರಿನ ಮೂಲಗಳ ಸಮಗ್ರ ಪರಿಶೀಲನೆ ನಡೆಸಿ, ನೀರಿನ ಮಟ್ಟ ಕುಸಿಯುತ್ತಿರುವ ಪ್ರದೇಶಗಳನ್ನು ಗುರುತಿಸಿ ಮುಂಚಿತ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಯಿತು. ನೀರಿನ ಸರಬರಾಜಿನಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂಬ ಎಚ್ಚರಿಕೆಯನ್ನೂ ನೀಡಲಾಯಿತು.

ಸಭೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಎಂ.ಜಿ.ಎನ್.ಆರ್.ಇ.ಜಿ.ಎ) ಅಡಿಯಲ್ಲಿ ಕ್ರಿಯಾ ಯೋಜನೆ ತಯಾರಿಕೆ ಕುರಿತು ಸಮಗ್ರ ಚರ್ಚೆ ನಡೆಸಿ, ಗ್ರಾಮೀಣ ಮಟ್ಟದಲ್ಲಿ ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದರ ಜೊತೆಗೆ ಅಭಿವೃದ್ಧಿ ಕಾಮಗಾರಿಗಳನ್ನು ವೇಗಗೊಳಿಸಲು ಸೂಚಿಸಲಾಯಿತು. ಇನ್ನು ಬೀದಿ ನಾಯಿಗಳ ಹಾವಳಿ ತಡೆಗಟ್ಟುವಿಕೆಗಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಲಾಯಿತು ಹಾಗೂ ಈ ಸಂಬಂಧ ಹಣ ಸಂಗ್ರಹಣೆ ಮತ್ತು ವ್ಯವಸ್ಥಿತ ನಿರ್ವಹಣೆ ಕುರಿತು ಚರ್ಚಿಸಲಾಯಿತು.

ಲೈಬ್ರರಿ ಸೆಸ್‌ನ್ನು ಜಿಲ್ಲಾ ಪಂಚಾಯತ ಖಾತೆಗೆ ಸರಿಯಾಗಿ ಜಮಾ ಮಾಡುವಂತೆ ಸೂಚನೆ ನೀಡಲಾಗಿದ್ದು, ಶೇ.25 ಪ.ಜಾ/ಪ.ಪಂ ಸಮುದಾಯದವರಿಗೆ ಮೀಸಲಾದ ಅನುದಾನದ ಸಮರ್ಪಕ ಬಳಕೆ ಬಗ್ಗೆ ವಿಶೇಷ ಗಮನ ಹರಿಸಲು ತಿಳಿಸಲಾಯಿತು. ಪಂಚತಂತ್ರ 2.0 ಯೋಜನೆಯ ವಾರ್ಷಿಕ ಮುಕ್ತಾಯದ ಹಿನ್ನಲೆಯಲ್ಲಿ ಪ್ರಗತಿ ವರದಿಗಳನ್ನು ಪರಿಶೀಲಿಸಿ, ಬಾಕಿ ಉಳಿದಿರುವ ಕೆಲಸಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚಿಸಲಾಯಿತು.

ಮುಖ್ಯವಾಗಿ ಜಿಲ್ಲಾ ಮಾನವ ಅಭಿವೃದ್ಧಿ ವರದಿ 2025 ಹಾಗೂ ಸಮಗ್ರ ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ 2031ರ ದತ್ತಾಂಶ ವರದಿ ಅಂತಿಮಗೊಳಿಸುವ ಕುರಿತು ಮಾತನಾಡಿದ ಸಭೆಯಲ್ಲಿ ತಾಲ್ಲೂಕು ಮಟ್ಟದ ಮೇಲ್ವಿಚಾರಣಾ ಸಮಿತಿ ಸದಸ್ಯರು, ವಿಶೇಷ ಆಹ್ವಾನಿತರು ಹಾಗೂ ವಿವಿಧ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಕಆಔಗಳು) ಉಪಸ್ಥಿತರಿದ್ದು, ವರದಿ ತಯಾರಿಕೆಗೆ ಸಂಬಂಧಿಸಿದ ದತ್ತಾಂಶಗಳ ಪರಿಶೀಲನೆ ಮತ್ತು ಅಂತಿಮಗೊಳಿಸುವ ಕುರಿತು ಚರ್ಚೆ ನಡೆಸಲಾಯಿತು.

ಮಾನವ ಅಭಿವೃದ್ಧಿ ಸೂಚ್ಯಂಕಗಳ ಆಧಾರದ ಮೇಲೆ ತಾಲ್ಲೂಕಿನ ಅಭಿವೃದ್ಧಿ ಮಟ್ಟವನ್ನು ಸಮಗ್ರವಾಗಿ ಅಳೆಯುವ ಜೊತೆಗೆ, 2031ರ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಅಗತ್ಯವಾದ ಕ್ರಮಗಳ ಕುರಿತು ಸಭೆಯಲ್ಲಿ ಸಲಹೆ ಸೂಚನೆಗಳನ್ನು ನೀಡಲಾಯಿತು.

ಸಭೆ ಅಂತ್ಯದಲ್ಲಿ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ನಿಖರ ಹಾಗೂ ಸಂಪೂರ್ಣ ದತ್ತಾಂಶ ಒದಗಿಸಲು ಸೂಚನೆ ನೀಡಲಾಯಿತು.

ಈ ಸಭೆಯಲ್ಲಿ ತಾಲೂಕ ಪಂಚಾಯತಿಯ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಪಂಚಾಯತ ಆಡಳಿತಾಧಿಕಾರಿಗಳು, ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

# ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆ

## ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಉತ್ಪನ್ನ ಖರೀದಿ ಆರಂಭ; ರೈತರು ಸದುಪಯೋಗಕ್ಕೆ ಜಿಲ್ಲಾಧಿಕಾರಿ ಮನವಿ

**ಬೆಳಗಾವಿ ವಾರ್ತೆ ಧಾರವಾಡ :** 2026 ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ದರ ರೂ. 6,540 ರಂತೆ ಧಾರವಾಡ ಜಿಲ್ಲೆಯ ರೈತರಿಂದ ಮಾತ್ರ ಖರೀದಿಸಲು ಸರ್ಕಾರದಿಂದ ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ಜಿಲ್ಲಾ ಟಾಸ್ಕಪೋರ್ಸ್ ಸಮಿತಿ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಉತ್ಪನ್ನವನ್ನು ಖರೀದಿಸಲು ರೈತರ ನೋಂದಣಿಯು 80 ದಿನಗಳವರೆಗೆ ಅಂದರೆ ಏಪ್ರೀಲ್ 4, 2026 ದಿಂದ ಜೂನ್ 22, 2026 ರವರೆಗೆ ಹಾಗೂ ಉತ್ಪನ್ನ ಖರೀದಿಸಲು 90 ದಿನಗಳವರೆಗೆ ಅಂದರೆ ಏಪ್ರೀಲ್ 4, 2026 ರಿಂದ ಜುಲೈ 02, 2026 ರವರೆಗೆ ಅವಧಿಯನ್ನು ನಿಗದಿಗೊಳಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಕುಸಬೆ ಖರೀದಿ ಕೇಂದ್ರಗಳ ವಿವರ: ಕುಂದಗೋಳ ತಾಲೂಕಿನ ಯರಗುಪ್ಪಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿಯಮಿತದಿಂದ ಕುಂದಗೋಳ ಎ.ಪಿ.ಎಮ್.ಸಿ (ದೂ. ಸಂ:9901583895), ಯರಗುಪ್ಪಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿಯಮಿತದಿಂದ ಸಂಶಿ (ದೂ. ಸಂ:9901583895), ಹಿರೇಹರಕುಣಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿಯಮಿತದಿಂದ ಹಿರೇಹರಕುಣಿ (ದೂ. ಸಂ:9844198169) ಕಳಸ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿಯಮಿತದಿಂದ ಕಳಸ (ದೂ. ಸಂ:8123472931), ಹುಬ್ಬಳ್ಳಿ ತಾಲೂಕಿನ ಶಿರಗುಪ್ಪಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿಯಮಿತದಿಂದ ಶಿರಗುಪ್ಪಿ (ದೂ. ಸಂ:9538696718) ಹಾಗೂ ನವಲಗುಂದ ತಾಲೂಕಿನ ಶಿರೂರ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿಯಮಿತದಿಂದ ಶಿರೂರ (ದೂ. ಸಂ:9611498476) ಖರೀದಿ ಕೇಂದ್ರಗಳಾಗಿವೆ ಎಂದು ತಿಳಿಸಿದ್ದಾರೆ.

ಉತ್ಪನ್ನವನ್ನು ಖರೀದಿಸಲು ಅಗತ್ಯವಿರುವ ದಾಖಲೆಗಳು: ಆಧಾರ ಗುರುತಿನ ಚೀಟಿಯ ಮೂಲ ಪ್ರತಿ ಹಾಗೂ ಅದರ ನಕಲು ಪ್ರತಿ. ಪಹಣಿ ಪತ್ರಿಕೆಯಲ್ಲಿರುವ ಹೆಸರಿನ ರೈತರ ಆಧಾರ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆ ಪಾಸ್ ಪುಸ್ತಕದ ನಕಲು ಪ್ರತಿ.

**ಕುಸುಬೆ ಖರೀದಿಸಲು ಅನುಸರಿಸುವ ಕ್ರಮಗಳು:** ಚೆನ್ನಾಗಿ ಒಣಗಿರಬೇಕು, ತೇವಾಂಶವು ಶೇ.14 ಕ್ಕಿಂತ ಕಡಿಮೆ ಇರಬೇಕು. ಕುಸುಬೆ ಉತ್ಪನ್ನವು ಗುಣಮಟ್ಟದ ಗಾತ್ರ, ಬಣ್ಣ ಮತ್ತು ಆಕಾರವನ್ನು ಹೊಂದಿರಬೇಕು. ಗಟ್ಟಿಯಾಗಿರಬೇಕು ಮತ್ತು ಮಣ್ಣಿನಿಂದ ಬೇರ್ಪಡಿಸಲ್ಪಟ್ಟು ಸ್ವಚ್ಛವಾಗಿರಬೇಕು, ಸಾಣಿಗೆಯಿಂದ ಸ್ವಚ್ಛಗೊಳಿಸಿರಬೇಕು. ಕ್ರಿಮಿಕೀಟಗಳಿಂದ ಮುಕ್ತವಾಗಿರಬೇಕು. ರೈತರಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದವರು ನೀಡುವ ಗೋಣಿ ಚೀಲದಲ್ಲಿ 50 ಕೆ.ಜಿ. ಪ್ರಮಾಣದಲ್ಲಿ ತುಂಬಬೇಕು. ಕುಸುಬೆ ಪ್ರತಿ ಎಕರೆಗೆ ಐದು ಕ್ವಿಂಟಾ??ನಂತೆ ಹಾಗೂ ಪ್ರತಿ ರೈತರಿಂದ ಗರಿಷ್ಟ 20 (ಇಪ್ಪತ್ತು) ಕ್ವಿಂಟಾಲ್ ವರೆಗೆ ಖರೀದಿ ಪ್ರಮಾಣ ನಿಗದಿಪಡಿಸಿ ಖರೀದಿಸಲಾಗುವುದು.

ಸರ್ಕಾರದ ಬೆಂಬಲ ಬೆಲೆ ಪ್ರತಿ ಕ್ವಿಂಟಾ??ಗೆ ರೂ. 6,540 ರಂತೆ ಕುಸುಬೆಯನ್ನು ಖರೀದಿಸಲಾಗುವುದು.

ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಉಳಿದ ದಿನಗಳಲ್ಲಿ ಸಮಯ ಬೆಳಿಗ್ಗೆ 10 ರಿಂದ ಸಂಜೆ 6 ರವರೆಗೆ ಮಾತ್ರ ಖರೀದಿಸಲಾಗುವುದು. ಯಾವುದೇ ಸಂದರ್ಭದಲ್ಲಿ ರೈತರು ಮಧ್ಯವರ್ತಿಗಳ ಮೊರೆ ಹೋಗಬಾರದು. ಇದರ ಉಪಯೋಗವನ್ನು ರೈತರೇ ನೇರವಾಗಿ ಪಡೆಯಬೇಕು.

ಹೆಚ್ಚಿನ ಮಾಹಿತಿಗಾಗಿ ಹುಬ್ಬಳ್ಳಿ, ಅಣ್ಣಿಗೇರಿ, ಕುಂದಗೋಳ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಯವರನ್ನು ಹಾಗೂ ಶಾಖಾ ವ್ಯವಸ್ಥಾಪಕರು (ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ (ಕೆಓಎಫ್)) ಹುಬ್ಬಳ್ಳಿ (ದೂರವಾಣಿ ಸಂಖ್ಯೆ: 7975282932, 9900553956) ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಟಾಸ್ಕಪೋರ್ಸ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಕ್ತರ ಮನದಲ್ಲಿ ಶ್ರೀಶೈಲ ಮಲ್ಲಯ್ಯ ವಾಸ : ಜಗದ್ಗುರು ಡಾ. ಶ್ರೀ ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯಗಳು



**ಬೆಳಗಾವಿ ವಾರ್ತೆ ಕೊಪ್ಪಳ :** ಪಾದಯಾತ್ರೆ ಆರಂಭವಾದರೆ ಮಲ್ಲಿಕಾರ್ಜುನ ಸ್ವಾಮಿ ಶ್ರೀಶೈಲ ದೇವಸ್ಥಾನದಲ್ಲಿ ಇರುವುದಿಲ್ಲ, ಪಾದಯಾತ್ರೆ ಮಾಡುವ ಭಕ್ತರ ಮನದಲ್ಲಿ ಇರುತ್ತಾನೆ ಎಂದು ಆಂಧ್ರದ ಶ್ರೀಶೈಲ ಮಹಾಪೀಠದ ಶ್ರೀಶ್ರೀಶ್ರೀ 1008 ಜಗದ್ಗುರು ಡಾ.ಶ್ರೀ ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾಂಗಳವರು ಹೇಳಿದರು.

ನಗರದ ಹೊಸಪೇಟ ರಸ್ತೆ, ಮರಿಸ್ವಾಮಿ ಬಡಾವಣೆಯ ಶ್ರೀ ರೇಣುಕಾಚಾರ್ಯ ಮಂದಿರದ ಸಭಾಭವನದಲ್ಲಿ ಶ್ರೀಶೈಲ ಕ್ಷೇತ್ರದರ್ಶನ ಯಾತ್ರಾಬಳಗದಿಂದ 25ನೇ ವರ್ಷದ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ದಿವ್ಯಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಯುಗಾದಿ ಹಬ್ಬದ ವೇಳೆ ಲಕ್ಷಾಂತರ ಭಕ್ತರು ವಿವಿಧ ಭಾಗಗಳಿಂದ ಶ್ರೀಶೈಲಕ್ಕೆ ಪಾದಯಾತ್ರೆ ಮೂಲಕ ಬರುತ್ತಾರೆ. ಹಿಂದಿನ ಕಾಲದಲ್ಲಿ ಸಾರಿಗೆ ವ್ಯವಸ್ಥೆ ಸರಿಯಾಗಿ ಇದ್ದಿಲ್ಲ. ಆದರೆ, ಈಗಿನ ಕಾಲದಲ್ಲಿ ಎಲ್ಲೆಡೆ ಸಾರಿಗೆ ವ್ಯವಸ್ಥೆ ಸಾಕಷ್ಟು ಇದ್ದರೂ ಸಹ ಭಕ್ತರು ಪಾದಯಾತ್ರೆ ಮೂಲಕ ಶ್ರೀಶೈಲಕ್ಕೆ ಆಗಮಿಸುತ್ತಾರೆ. ಇದು ಭಕ್ತರು ಮಲ್ಲಯ್ಯ ಸ್ವಾಮಿ ಮೇಲೆ ಇಟ್ಟಿರುವ ಭಕ್ತಿಯನ್ನು ತೋರಿಸುತ್ತದೆ ಎಂದರು.

ಶ್ರೀಶೈಲ ಯಾತ್ರಾ ಬಳಗದ ಸಂಚಾಲಕರಾದ ಜಗದೀಶ್ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮೈನಳ್ಳಿ- ಬಿಕನಳ್ಳಿ ಹಿರೇಮಠದ ಶ್ರೀ ಸಿದ್ದೇಶ್ವರ ಶಿವಾಚಾರ್ಯರು, ಅಳವಂಡಿ ಹಿರೇಮಠದ ಶ್ರೀ ಮರುಳಾರಾಧ್ಯ ಶಿವಾಚಾರ್ಯರು, ಕಂಪಸಾಗರ ಹಿರೇಮಠ ಶ್ರೀ ನಾಗಭೂಷಣ ಶಿವಾಚಾರ್ಯರು, ಶ್ರೀಶೈಲ ಕ್ಷೇತ್ರದರ್ಶನ ಬಳಗದ ಹಂಪಯ್ಯ ಬನ್ನಿಮಠ, ಪಂಪಯ್ಯ ಹಿರೇಮಠ, ಬಸವರಾಜ, ರುದ್ರೇಶ ವಿ, ಗವಿಸಿದ್ದಪ್ಪ, ಶಿವಶಾಂತವೀರ ಹಿರೇಮಠ, ಮಂಜುನಾಥ ಹಿರೇಮಠ, ಗಿರೀಶ್ ಅಂಗಡಿ, ಗೋವಿಂದರಾಜ ಶೆಟ್ಟರ್, ಶರಣಪ್ಪ ತುಮರಗುದ್ದಿ, ಲೇಪಾಕ್ಷಪ್ಪ ಆನಂದಹಳ್ಳಿ, ಶೋಭಾ ಪಂಡಿತಾರಾಧ್ಯ, ಜಯಶ್ರೀ ಶಿವಶಾಂತ ವೀರಸ್ವಾಮಿ, ನಿರ್ಮಲಾ ಷಡಕ್ಷರಯ್ಯ, ಶೋಭಾ ನಿಂಗನಗೌಡ್ರು, ಜಯಶ್ರೀ, ಅಶೋಕ, ಕಸ್ತೂರಿ, ಪ್ರಕಾಶ, ಮಮತಾ ಮಂಜುನಾಥ ಸ್ವಾಮಿ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು.

ನಂತರ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು ಮತ್ತು ಕೊಪಣ ಟ್ರಸ್ಟ್ ವತಿಯಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿತ್ತು.

ಕಾರ್ಯಕ್ರಮವನ್ನು ವರ ಪ್ರಸಾದ ಸ್ವಾಗತಿಸಿ, ಚೇತನಕುಮಾರ ಹಿರೇಮಠ ನಿರೂಪಿಸಿದರು. ಬೆಳಗ್ಗೆ ಶ್ರೀ ರೇಣುಕಾಚಾರ್ಯ ಮೂರ್ತಿಗೆ ರುದ್ರಾಭಿಷೇಕ, ಶ್ರೀ ಭ್ರಮರಾಂಭ ಸಮೇತ ಮಲ್ಲಿಕಾರ್ಜುನ ಸ್ವಾಮಿಯ ಮಹಾಪರ್ವ ಪೂಜೆ, ಶಿವಶಕ್ತಿ ಧ್ಯಾನ ಭಜನೆ, ಭಕ್ತಿ ಸಂಗೀತ ಕಾರ್ಯಕ್ರಮ, ತುಲಭಾರ ಸೇವೆ ಸೇರಿ ಅನೇಕ ಕಾರ್ಯಕ್ರಮಗಳು ಜರುಗಿದವು.

# ಇಂದು ಗಂಗಾವತಿಯಲ್ಲಿ ಕೃಷಿ ಕೂಲಿಕಾರರ 3ನೇ ಕೊಪ್ಪಳ ಜಿಲ್ಲಾ ಸಮ್ಮೇಳನ

**ಬೆಳಗಾವಿ ವಾರ್ತೆ ಗಂಗಾವತಿ :** ವಿಕಸಿತ ಭಾರತ ಜೀ.ರಾವ್ ಜಿ, ಉದ್ಯೋಗ ಭರವಸೆ, ಅಜೀವಿಕ ಅಭಿಯಾನ (ಗ್ರಾಮೀಣ) ಮಸೂದೆ- 2025 ನ್ನು ರದ್ದು ಪಡಿಸಲು, ಸರಕಾರಿ ಭೂಮಿ ಸಾಗುವಳಿದಾರರಿಗೆ ಪಟ್ಟಾ ಕೊಡಲು ಒತ್ತಾಯಿಸಿ, ನಿವೇಶನ ರಹಿತರಿಗೆ ಮನೆ, ನಿವೇಶನ ಕೊಡಲು ಒತ್ತಾಯಿಸಿ ಕೃಷಿ ಕೂಲಿಕಾರರ 3ನೇ ಕೊಪ್ಪಳ ಜಿಲ್ಲಾ ಸಮ್ಮೇಳನವನ್ನು ಶ್ರೀ ಚನ್ನಬಸವ ಸ್ವಾಮಿ ಕಲಾ ಮಂದಿರ, ಶಿವೆ ಟಾಕೀಸ್ ಹಿಂದುಗಡೆ, ಗಂಗಾವತಿ ಯಲ್ಲಿ ದಿನಾಂಕ 09 ಹಾಗೂ 10 ಏಪ್ರಿಲ್ ರಂದು 2 ದಿನಗಳ ಕಾಲ ನಡೆಯಲಿದೆ.

ಈ ಸಮ್ಮೇಳನಕ್ಕೆ ಕೇಂದ್ರ ಪ್ರಧಾನ ಕಾರ್ಯದರ್ಶಿ ಕಾಮ್ರೇಡ್ ಬಿ. ವೆಂಕಟ್ ರವರು, ರಾಜ್ಯ ಉಪಾಧ್ಯಕ್ಷ ಜಿ. ಎನ್ ನಾಗರಾಜು ಮತ್ತು ಕಾರ್ಯದರ್ಶಿ ಚಂದ್ರಪ್ಪ ಹೊಸ್ಕೆರ ಆಗಮಿಸುತಿದ್ದು ಈ ಸಮ್ಮೇಳನ ದ್ದಲಿ ಜಿಲ್ಲೆಯ ಕೃಷಿ ಕೂಲಿಕಾರರ ಸಮಸ್ಯೆ ಗಳ ಕುರಿತು ಸುದೀರ್ಘ ಚರ್ಚೆ ನಡೆಸಿ ನಿರ್ಣಯ ಕೈ ಗೊಳ್ಳುತ್ತಿದ್ದೂ ಜಿಲ್ಲೆಯ ದುಡಿಯುವ ವರ್ಗ ಕೃಷಿ ಕೂಲಿಕಾರರು ಈ ಸಮ್ಮೇಳನದಲ್ಲಿ ಭಾಗಿಯಾಗಿ ಸಮ್ಮೇಳನವನ್ನು ಯಶಸ್ವಿ ಮಾಡಲು ಕೋರಲಾಗಿದೆ.

ಆಧುನೀಕರಣದ ಹೆಸರಿನಲ್ಲಿ ಅತಿಯಾದ ಯಂತ್ರಗಳ ಬಳಕೆಯಿಂದ ಕೃಷಿಯಲ್ಲಿ ಉದ್ಯೋಗದ ದಿವಸಗಳು ಕಡಿಮೆಯಾಗುತ್ತಲೇ ನಡೆದಿದೆ. ಒಂದೆಡೆ ಕೃಷಿಕರು ಕಳಪೆ ಗೊಬ್ಬರ, ಬೀಜ, ಕ್ರಿಮಿನಾಶಕ, ರಸ್ತೆ ವಿದ್ಯುತ್, ಮಾರುಕಟ್ಟೆಯಲ್ಲಿ ಕಡಿಮೆ ಬೆಲೆ ಹೀಗೆ ಹಲವಾರು ಸಂಕಷ್ಟಗಳ ಜೊತೆಗೆ ರೈತರು ಹವಾಮಾನ ವೈಪರಿತ್ಯ ಹೀಗೆ ನೂರಾರು ಸಮಸ್ಯೆಗಳ ಮಧ್ಯದಲ್ಲಿ ರೈತರು ಕೃಷಿಯಿಂದ ಹಿಂದೆ ಸರೆಯುತ್ತಿದ್ದಾರೆ. ಕೂಲಿಕಾರರ ಮಹತ್ವಾಕಾಂಕ್ಷಿ ಕಾಯಿದೆಯಾದ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಭರವಸೆ ಕಾಯಿದೆ 2005ನ್ನು ರದ್ದುಪಡಿಸಲಾಗಿದೆ, ಈ ಕಾಯಿದೆಯನ್ವಯ ಕೂಲಿಕಾರರ ಬದುಕಿಗೆ ಸ್ವಲ್ಪ ಸಹಾಯವಾಗಿತ್ತು. ಅದಕ್ಕಾಗಿ 100 ದಿವಸದ ಬದಲಿಗೆ 200 ದಿವಸ ಕೆಲಸ 600 ರೂ. ಕೇಳಲಾಗಿತ್ತು. ಆದರೆ ಈಗ ಕೇಂದ್ರ ಸರಕಾರ ಈ ಕಾಯಿದೆಯನ್ನು ರದ್ದುಮಾಡಿ ಜೀ.ರಾವ್ ಜಿ ಕಾಯಿದೆಯನ್ನು ಜಾರಿಗೆ ತಂದಿದ್ದಾರೆ.

ಈ ಕಾಯಿದೆಯಲ್ಲಿ ಕೂಲಿಕಾರರಿಗೆ ಕೆಲಸದ ಭರವಸೆಯೇ ಇಲ್ಲ. ಮತ್ತು ಕೂಲಿ ಸಿಗುತ್ತದೆ ಎಂಬ ಭರವಸೆಯೂ ಇಲ್ಲ. ಹೀಗಾಗಿ ಈ ಕಾಯಿದೆ ರದ್ದುಪಡಿಸಲು ಸಂಘಟನೆ ಜಿಲ್ಲೆಯಾದ್ಯಂತ ಮತ್ತು ಎಲ್ಲಾ ರಾಜ್ಯಾದಾದ್ಯಂತ ಹೋರಾಟ ನಡೆಸಲು ತೀರ್ಮಾನಿಸಲಾಗುತ್ತದೆ. ಕೇಂದ್ರ ಸರಕಾರವನ್ನು ಈ ಕಾಯಿದೆ ರದ್ದುಪಡಿಸಲು ರೈತ ಸಂಘಟನೆಗಳು, ಕಾರ್ಮಿಕ ಸಂಘಟನೆಗಳು, ಮಹಿಳಾ ಸಂಘಟನೆಗಳು, ವಿದ್ಯಾರ್ಥಿ ಯುವಜನ ಸಂಘಟನೆಗಳು ಮತ್ತು ಸಮಾನ ಮನಸ್ಕ ಎಲ್ಲಾ ಸಂಘಟನೆಗಳನ್ನು ಕೂಡಿಸಿಕೊಂಡು ಇಡೀ ದೇಶದ ಮೂಲೆ ಮೂಲೆಯಲ್ಲಿ ತೀವ್ರತರವಾದ ಹೋರಾಟ ನಡೆಸಲು ತೀರ್ಮಾನಿಸಿದೆ.

ಅದೇ ರೀತಿ ಸುಮಾರು 30-40 ವರ್ಷದಿಂದ ಸರಕಾರಿ ಭೂಮಿ ಸಾಗುವಳಿ ಮಾಡುತ್ತಿರುವವರಿಗೆ ಹಕ್ಕುಪತ್ರ ಕೊಡಬೇಕು ಮತ್ತು ನಗರ ಪ್ರದೇಶ, ಗ್ರಾಮೀಣ ಪ್ರದೇಶದಲ್ಲಿ ನಿವೇಶನ ರಹಿತರಿಗೆ ಮನೆ ನಿವೇಶನ ಕೊಡಬೇಕೆಂದು ಜೊತೆಗೆ ಕೊಪ್ಪಳದ ವಾಯು ಮಾಲಿನ್ಯದ ಬಗ್ಗೆ ಮತ್ತು ಕೃಷಿಗೆ ಪೂರಕವಾದ ಸಣ್ಣ ನೀರಾವರಿಯಾದ ಕೆರೆ ನೀರಿನಿಂದ ನೀರಾವರಿ ಮತ್ತು ಜಿಲ್ಲೆಯ ಪ್ರಮುಖ ಏತ ನೀರಾವರಿಗಳ ಬಗ್ಗೆ ಸಿಂಗಟಾಲೂರ ಮತ್ತು ಸಮಾನಾಂತರ ಜಲಾಶಯದ ಬಗ್ಗೆಯೂ ಈ ಸಮ್ಮೇಳನದಲ್ಲಿ ಚರ್ಚೆ ನಡೆಸಿ ಮುಂದೆ ಹೋರಾಟ ನಡೆಸಲು ತೀರ್ಮಾನಿಸಲಾಗುತ್ತದೆ. ಅದಕ್ಕಾಗಿ ಸಾರ್ವಜನಿಕರೆಲ್ಲರೂ ಪಕ್ಷಬೇಧ ಮರೆತು ಈ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಮ್ಮೇಳನಕ್ಕೆ ಸಂಘಟನೆಯ ಕೇಂದ್ರ ಸಮಿತಿಯ ಪ್ರಧಾನ ಕಾರ್ಯದರ್ಶಿ ಬಿ. ವೆಂಕಟ, ಕಾರ್ಯದರ್ಶಿ ಸುಂಕಪ್ಪ ಗದಗ, ಅಧ್ಯಕ್ಷರು ಎಂ. ಬಸವರಾಜ ಭಾಗವಹಿಸಲಿದ್ದಾರೆ.

# ಸಮಾಜ ಸೇವಾ ರಾಜ್ಯ ಪ್ರಶಸ್ತಿಗೆ ಕುಕನೂರು ತಾಲೂಕ ಇಟಗಿಯ ವಜೀರ್ ಸಾಬ ತಳಕಲ್ ಭಾಜನ

**ಕುಕನೂರು :** ವಿಶ್ವ-ವಿಜಯ ಪತ್ರಿಕೆಯ 21ನೇ ವರ್ಷಾಚರಣೆಯ ಅಂಗವಾಗಿ ಸಮಾಜ ಸೇವೆಯಲ್ಲಿ ಗಣನೀಯ ಸಾಧನೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಕೊಡಮಾಡುವ ಸಮಾಜ ಸೇವಾ ರತ್ನ ರಾಜ್ಯ ಪ್ರಶಸ್ತಿಗೆ ಕುಕನೂರು ತಾಲೂಕ ಇಟಗಿ ಗ್ರಾಮದ ವಜೀರ್ ಸಾಬ ತಳಕಲ್ ಇವರನ್ನು ಆಯ್ಕೆ ಮಾಡಲಾಗಿದೆ.

ನಾಡಿನೆಲ್ಲೆಡೆ ಎಲೆಮರೆ ಕಾಯಿಯಂತೆ ಉಳಿದಿರುವ, ಉಳಿಯುತ್ತಿರುವ ವಿವಿಧ ಕ್ಷೇತ್ರದಲ್ಲಿ ವಿಷೇಶವಾಗಿ ಸಮಾಜ ಸೇವೆಯಲ್ಲಿ, ಹಾಗೂ ರೈತ ಸಂಘಟನೆಯಲ್ಲಿ ಸಕ್ರೀಯವಾಗಿ ಈ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಮಾಡುತ್ತಿರುವುದಕ್ಕಾಗಿ ಹುಬ್ಬಳ್ಳಿಯ ಸಂಗೊಳ್ಳಿ ರಾಯಣ್ಣ ನಗರದ ಡಾ. ಬಿ. ಆರ್ ಅಂಬೇಡ್ಕರ ಸಭಾ ಭವನದಲ್ಲಿ ಏಪ್ರೀಲ್ 25.04.2026ರಂದು ನಡೆಯುವ ರಾಜ್ಯ ಮಟ್ಟದ ಪತ್ರಿಕಾ ಕಾರ್ಯಕ್ರಮದಲ್ಲಿ ವಜೀರ್ ಸಾಬ ತಳಕಲ್ ಸಾ. ಇಟಗಿ ಇವರಿಗೆ ಸಮಾಜ ಸೇವಾ ರತ್ನ ರಾಜ್ಯ ಪ್ರಶಸ್ತಿ ಪ್ರಧಾನ ಮಾಡಲಾಗುವುದು ಎಂದು ವ್ಯವಸ್ಥಾಪಕ ಸಂಪಾದಕರಾದ ದಾನೇಶ. ಎಂ ಬುರುಡಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಕೌಟುಂಬಿಕ ಕಲಹ : ಪತಿಯಿಂದ ಪತ್ನಿ ಹತ್ಯೆ

**ಕುಕನೂರು :** ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪತಿಯೊಬ್ಬ ತನ್ನ ಪತ್ನಿಯ ತಲೆಗೆ ಸುತ್ತಿಗೆಯಿಂದ ಹೊಡೆದು ಹತ್ಯೆಮಾಡಿದ ಘಟನೆ, ಸೋಮವಾರ ರಾತ್ರಿ ನಡೆದಿದೆ.

ಹೊಸದಿಲ್ಲಿ ಮೂಲದ ಮಾಳವಿಕಾ(27) ಮೃತರು. ಸೋಂಪುರ ಗ್ರಾಮದ ಅವಿನಾಶ ಡೊಳ್ಳಿನ್ ಆರೋಪಿ ಪತಿ. ತುಮಕೂರಿನಲ್ಲಿ ಸ್ಪೋಕನ್ ಇಂಗ್ಲಿಷ್ ತರಬೇತಿ ವೇಳೆ ಇವರಿಬ್ಬರ ಪರಿಚಯವಾಗಿದೆ. ಈ ಪರಿಚಯ ನಂತರ ಪ್ರೀತಿ, ಪ್ರೇಮಕ್ಕೆ ತಿರುಗಿದೆ. ಇವರಿಬ್ಬರ ಮದುವೆ ಸೋಂಪುರ ಗ್ರಾಮದಲ್ಲಿ 2022ರಲ್ಲಿ ನಡೆದಿತ್ತು. ಕೆಲವು ತಿಂಗಳು ಉತ್ತಮವಾಗಿ ಜೀವನ ನಡೆಸಿದ್ದರು. ನಂತರ ಅವರ ಮಧ್ಯೆ ವೈಮನಸ್ಸು ಉಂಟಾಗಿದೆ.

ಸೋಮವಾರ ರಾತ್ರಿ ಇಬ್ಬರ ಮಧ್ಯೆ ಜಗಳವಾಗಿದೆ. ಜಗಳ ವಿಪರೀತಕ್ಕೆ ಹೋಗಿದೆ. ಸಿಟ್ಟಿನ ಭರದಲ್ಲಿ ಆರೋಪಿ ಅವಿನಾಶ, ಪತ್ನಿಯ ತಲೆಗೆ ಸುತ್ತಿಗೆಯಿಂದ ಬಲವಾಗಿ ಹೊಡೆದಿದ್ದಾನೆ. ತೀವ್ರ ಗಾಯಗೊಂಡ ಮಾಳವಿಕಾ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆಎಂದು ತಿಳಿದು ಬಂದಿದೆ.

ಈ ಗೃಹಿಣಿ ಅನಾಥೆಯಾಗಿದ್ದರಿಂದ ಗ್ರಾಪಂ ಮಾಜಿ ಸದಸ್ಯ ಬಸವರಾಜ ಅವರು ನೀಡಿದ ದೂರಿನ ಮೇರೆಗೆ ಪಿಎಸ್‌ಐ ಎಸ್.ಪಿ ನಾಯಕ್ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಆರೋಪಿ ಪತಿ ಅವಿನಾಶ ಮತ್ತು ಅತ್ತೆ ಚನ್ನಮ್ಮನನ್ನು ಪೊಲೀಸರು ವಶಕ್ಕೆ ಪಡೆದು, ವಿಚಾರಣೆ ನಡೆಸಿದ್ದಾರೆ.

# ಫುಟ್ಬಾಲ್ ಬೇಸಿಗೆ ತರಬೇತಿ ಶಿಬಿರದ ಉದ್ಘಾಟನೆ ಸಮಾರಂಭ 2026




**ಬೆಳಗಾವಿ ವಾರ್ತೆ ಗದಗ:** ಗದಗ್ ಸಿಟಿ ಫುಟ್ಬಾಲ್ ಕ್ಲಬ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದೊಂದಿಗೆ ಫುಟ್ಬಾಲ್ ಬೇಸಿಗೆ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭ ತರಬೇತಿ ಸ್ಥಳ: ಕೆ ಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣ ಏ.08 ರಿಂದ ಮೇ 31ರವರೆಗ ತರಬೇತಿ ನೀಡಲಾಗುವುದು. ಕ್ರೀಡಾಪಟುಗಳ ಅನುಕೂಲಕ್ಕಾಗಿ ಬೆಳಿಗ್ಗೆ 06 ರಿಂದ 7.30 ಗಂಟೆಯವರೆಗೆ ತರಬೇತಿ ನೀಡಲಾಗುತ್ತದೆ .ಉದ್ಘಾಟನೆಯ ಮುಖ್ಯ ಅಧ್ಯಕ್ಷರಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಕೃಷ್ಣೇಗೌಡ ಪಾಟೀಲ್ ರವರು ಸಸಿಗೆ ನೀರನ್ನ ಎರೆಯುವುದರ ಮುಖಾಂತರ ಉದ್ಘಾಟನೆ ನೆರವೇರಿಸಿದರು.

ಪ್ರಾಸ್ತಾವಿಕ ನುಡಿಯನ್ನು ಮಾತನಾಡಿದ ಜಿಸಿಎಫ್ ಸಿ ಅಧ್ಯಕ್ಷರಾದ ಶ್ರೀಯುತ ಸ್ಯಾಮ್ ಸನ್ ಡಾನ್ ಅವರು ಆಗಮಿಸಿದಂತ ಪಾಲಕರಿಗೆ ಫುಟ್ಬಾಲ್ ಕ್ರೀಡೆಯು ಮಕ್ಕಳ ವಿಕಸಿತ ಬೆಳವಣಿಗೆಯಲ್ಲಿ ವಹಿಸುವ ಪ್ರಮುಖ ಪಾತ್ರವನ್ನು ತಿಳಿಸುತ್ತಾ ಕಳೆದು ಒಂದು ವರ್ಷದ ಅವಧಿಯಲ್ಲಿ ಕ್ಲಬ ನ ವಿಶೇಷ ಸಾಧನೆಗಳ ಬಗ್ಗೆ ವಿವರಿಸಿದರು .

ಉದ್ಘಾಟನಾ ಅಧ್ಯಕ್ಷರಾಗಿ ಭಾಷಣ ಮಾಡಿದ ಕೃಷ್ಣೇಗೌಡ ಪಾಟೀಲ್ ಅವರು ಫುಟ್ಬಾಲ್ ಕ್ರೀಡೆಯು ಗದಗ್ ಜಿಲ್ಲೆಯಲ್ಲಿ ಹೆಸರಾಂತ ಕ್ರೀಡೆಯಾಗಿ ಬೆಳೆಯುತ್ತಿದೆ ಅದರಲ್ಲಿ GCFC ಕ್ಲಬನ ಪಾತ್ರ ಮಹತ್ವವಾಗಿದೆ.GCFC ಕ್ಲಬ್‌ನಲ್ಲಿ ಅನುಭವ ಹೊಂದಿದ ಪ್ರಮಾಣಿತ ತರಬೇತುದಾರರು ವೃತ್ತಿಪರ ರೀತಿಯಲ್ಲಿ ತರಬೇತಿ ನೀಡುತ್ತಿದ್ದಾರೆ.. ಇದರ ಸದುಪ ಯೋಗ ಪಡೆದುಕೊಂಡು ಮಕ್ಕಳು ಪ್ರತಿ ದಿನ ಫುಟ್ಬಾಲ್ ತರಬೇತಿಯಲ್ಲಿ ಪಾಲ್ಗೊಂಡು ರಾಜ್ಯ ರಾಷ್ಟ್ರ ಮತ್ತು ಅಂತರಾಷ್ಟ್ರ ಮಟ್ಟದಲ್ಲಿ ಮಿಂಚಬೇಕೆಂದು ಗದಗ್ ಜಿಲ್ಲೆಗೆ ಕೀರ್ತಿಯನ್ನು ತರಬೇಕೆಂದು ಹರಸಿದರು. ಅದೇ ರೀತಿಯಾಗಿ ಇನ್ನು ಕೆಲವೇ ದಿನಗಳಲ್ಲಿ ಕೆ ಎಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಗುಣಮ ಟ್ಟದ ಹೊನಲು ಬೆಳಕಿನ ಫುಟ್ಬಾಲ್ ಟರ್ಫ್ ಮೈದಾನವನ್ನು ನಿರ್ಮಾಣ ಮಾಡಿಕೊಡ ಲಾಗುವುದು ಎಂದು ಭರವಸೆಯನ್ನು ನೀಡಿದರು.

# ಕರ್ನಾಟಕ ವಿಶ್ವವಿದ್ಯಾಲಯದಿಂದ ವೀರೇಶ ಜಿ. ಹಿರೇಮಠ ಅವರಿಗೆ ಪಿಎಚ್.ಡಿ ಪ್ರಧಾನ

**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ವಿಶ್ವವಿದ್ಯಾಲಯ ವಿಜ್ಞಾನ ಮತ್ತು ತಂತ್ರಜ್ಞಾನ ನಿಖಾಯದ ಭೌತಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಸಂಶೋಧನಾ ವಿದ್ಯಾರ್ಥಿಯಾಗಿದ್ದ ವೀರೇಶ ಗುರುಸಿದ್ದಯ್ಯ ಹಿರೇಮಠ ಅವರು ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಮಂಡಿಸಿದ್ದ, ಸಿಂಥೆಸಿಸ್ ಆಂಡ್ ಕ್ಯಾರಕ್ಟರೆಜೇಶನ್ ಆಫ್ ಸಮ್ ರೇರ್ ಅರ್ಥಡೊಪ್ಸ್ ಫೆರೆಟ್ ನ್ಯಾನೊಪಾರ್ಟಿಕಲ್ಸ್ ಫಾರ್ ಸೆನ್ಸರ್ ಅಪ್ಲಿಕೇಶನ್ಸ್ (Title of the thesis: Synthesis and Characterisation of Some Rare Earth Doped Ferrite Nanoparticles for Sensor Applications) ವಿಷಯ ಕುರಿತು ಸಲ್ಲಿಸಿದ್ದ ಸಂಶೋಧನಾ ಮಹಾಪ್ರಬಂಧಕ್ಕೆ ಏಪ್ರಿಲ್ 2, 2026 ರಂದು ಕರ್ನಾಟಕ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ಪ್ರಧಾನ ಮಾಡಿದೆ.



ಕರ್ನಾಟಕ ವಿಶ್ವವಿದ್ಯಾಲಯು ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯ ವಿಭಾಗದ ಭೌತಶಾಸ್ತ್ರ ಪ್ರಾಧ್ಯಾಪ ಡಾ. ಜಿ.ಎಚ್. ಮಳಿಮಠ ಅವರು ಮಾರ್ಗದರ್ಶನ ಮಾಡಿದ್ದಾರೆ.

ಪ್ರಸ್ತುತ ಡಾ. ವಿರೇಶ ಗುರುಸಿದ್ದಯ್ಯ ಹಿರೇಮಠ ಅವರು ಕೆಎಸ್ ಸಂಸ್ಥೆಯ ಹುಬ್ಬಳ್ಳಿಯ ಪಿ.ಸಿ.ಜಾಬಿನ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಇವರ ಸಾಧನೆಗೆ ಕೆಎಸ್ ಸಂಸ್ಥೆಯ ಚೇರ್ಮನ್ ಅಮೀತ ಕೋರೆ, ಕಾಲೇಜು ಪ್ರಾಚಾರ್ಯರಾದ ಡಾ.ಸಂದ್ಯಾ ಕುಲಕರ್ಣಿ, ಬಸಯ್ಯ ಬಳಗಾನೂರಮಠ ಸೇರಿದಂತೆ ಕಾಲೇಜು ಪ್ರಾಧ್ಯಾಪಕರು, ಸಿಬ್ಬಂದಿ, ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

# ಗದಗದಲ್ಲಿ ಗಣತಿದಾರರಿಗೆ ಸಮಗ್ರ 3 ದಿನಗಳ ತರಬೇತಿ

## ಶಿಸ್ತು, ನಿಖರತೆ ಮತ್ತು ಜನಸಹಭಾಗಿತ್ವಕ್ಕೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಒತ್ತು

**ಬೆಳಗಾವಿ ವಾರ್ತೆ ಗದಗ:** ಜನಗಣತಿ ಕಾರ್ಯವನ್ನು ಸುಗಮವಾಗಿ ಹಾಗೂ ಪರಿಣಾಮಕಾರಿ ಯಾಗಿ ನಡೆಸುವ ಉದ್ದೇಶದಿಂದ ಗದಗ ನಗರ ಮತ್ತು ಗ್ರಾಮೀಣ ಭಾಗಗಳ ಗಣತಿದಾರರಿಗೆ ಮೂರು ದಿನಗಳ ಸಮಗ್ರ ತರಬೇತಿ ಕಾರ್ಯಕ್ರಮವನ್ನು ನಗರದ ಗುರುಬಸವ ಪ್ರೌಢಶಾಲೆಯಲ್ಲಿ ಏಪ್ರಿಲ್ 6 ರಿಂದ 8 ರವರೆಗೆ ಯಶಸ್ವಿಯಾಗಿ ನಡೆಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರ ಮಾರ್ಗದರ್ಶನದಲ್ಲಿ ನಡೆದ ಈ ತರಬೇತಿ ಕಾರ್ಯಕ್ರಮದಲ್ಲಿ ಗಣತಿದಾರರಿಗೆ ಕಾರ್ಯಪದ್ಧತಿ, ಮಾಹಿತಿಯ ಸಂಗ್ರಹಣೆ ವಿಧಾನಗಳು, ತಂತ್ರಜ್ಞಾನ ಬಳಕೆ ಹಾಗೂ ಕ್ಷೇತ್ರ ಮಟ್ಟದ ಸವಾಲುಗಳನ್ನು ಎದುರಿಸುವ ಬಗ್ಗೆ ವಿವರವಾದ ಮಾರ್ಗದರ್ಶನ ನೀಡಲಾಯಿತು.

ತರಬೇತಿಯಲ್ಲಿ ಗಣತಿದಾರರಿಗೆ ಮನೆಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ವಿಧಾನ, ಪ್ರತಿ ಕುಟುಂಬದ ಸಾಮಾಜಿಕ–ಆರ್ಥಿಕ ಸ್ಥಿತಿಗತಿ ದಾಖಲಿಸುವ ಕ್ರಮ, ಮಾಹಿತಿಯ ನಿಖರತೆ ಕಾಪಾಡುವ ಅಗತ್ಯತೆ ಹಾಗೂ ಗೌಪ್ಯತೆ ಕಾಯ್ದುಕೊಳ್ಳುವ ಮಹತ್ವವನ್ನು ವಿವರಿಸಲಾಯಿತು. ಇತ್ತೀಚಿನ ತಂತ್ರಜ್ಞಾನವನ್ನು ಬಳಸಿಕೊಂಡು ಡಿಜಿಟಲ್ ಮೂಲಕ ಮಾಹಿತಿ ದಾಖಲಿಸುವ ವಿಧಾನಗಳನ್ನೂ ಪರಿಚಯಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಅವರು, ಜನಗಣತಿ ದೇಶದ ಯೋಜನೆ ರೂಪಿಸುವ ಮೂಲಭೂತ ಆಧಾರವಾಗಿದ್ದು, ಶಿಕ್ಷಣ, ಆರೋಗ್ಯ, ವಸತಿ, ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸರ್ಕಾರದ ಯೋಜನೆಗಳು ರೂಪಗೊಳ್ಳಲು ಇದರ ಮಾಹಿತಿ ಬಹುಮುಖ್ಯವಾಗುತ್ತದೆ ಎಂದು ಹೇಳಿದರು. ಆದ್ದರಿಂದ ಗಣತಿದಾರರು ಯಾವುದೇ ರೀತಿಯ ತಪ್ಪಿಲ್ಲದೆ, ಶಿಸ್ತು ಮತ್ತು ಸಂಯಮದಿಂದ ತಮ್ಮ ಕರ್ತವ್ಯವನ್ನು ನಿರ್ವಹಿಸಬೇಕು ಎಂದು ಸೂಚಿಸಿದರು.

ಜನರ ಸಹಕಾರವಿಲ್ಲದೆ ಗಣತಿ ಕಾರ್ಯ ಯಶಸ್ವಿಯಾಗಲು ಸಾಧ್ಯವಿಲ್ಲ ಎಂಬುದನ್ನು ಉಲ್ಲೇಖಿಸಿದ ಅವರು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ಸರಿಯಾದ ಮಾಹಿತಿಯನ್ನು ಪಡೆದುಕೊಳ್ಳುವಲ್ಲಿ ಗಣತಿದಾರರು ಪ್ರಮುಖ ಪಾತ್ರವಹಿಸಬೇಕು ಎಂದು ಹೇಳಿದರು.

ಪ್ರತಿ ಮನೆಗೂ ಭೇಟಿ ನೀಡುವಾಗ ಸಹಾನುಭೂತಿಯೊಂದಿಗೆ, ಗೌರವದಿಂದ ವರ್ತಿಸುವಂತೆ ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಮಾತನಾಡಿ, ಜನಗಣತಿ ಪ್ರಕ್ರಿಯೆ ದೇಶದ ಅಭಿವೃದ್ಧಿಗೆ ದಿಕ್ಕು ತೋರಿಸುವ ಮಹತ್ವದ ಸಾಧನವಾಗಿದ್ದು, ಸಂಗ್ರಹವಾಗುವ ಪ್ರತಿಯೊಂದು ಮಾಹಿತಿ



ಭವಿಷ್ಯದ ಯೋಜನೆಗಳಿಗೆ ಮಾರ್ಗಸೂಚಿಯಾಗುತ್ತದೆ ಎಂದು ಹೇಳಿದರು. ಆದ್ದರಿಂದ ಯಾವುದೇ ಅಸಡ್ಡೆ ತೋರದೆ, ನಿಖರ ಹಾಗೂ ಪೂರ್ಣ ಮಾಹಿತಿಯನ್ನು ಸಂಗ್ರಹಿಸುವಂತೆ ಗಣತಿದಾರರಿಗೆ ಸೂಚಿಸಿದರು.

ಗದಗ ಬೆಟಗೇರಿ ನಗರಸಭೆಯ ಪೌರಾಯುಕ್ತ ರಾಜಾರಾಮ ಪವಾರ ಅವರು ಮಾತನಾಡಿ, ಜನಗಣತಿ ಕಾರ್ಯ ರಾಷ್ಟ್ರದ ಆರ್ಥಿಕ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ತಿಳಿಸಿದರು. ಸರಿಯಾದ ಮಾಹಿತಿ ಆಧಾರದ ಮೇಲೆ ಸರ್ಕಾರ ಅಭಿವೃದ್ಧಿ ಯೋಜನೆಗಳನ್ನು ರೂಪಿಸುವುದರಿಂದ, ಪ್ರತಿಯೊಬ್ಬ ಗಣತಿದಾರರೂ ತಮ್ಮ ಜವಾಬ್ದಾರಿಯನ್ನು ಅರಿತು, ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಶೀಲ್ದಾರ ಶ್ರೀನಿವಾಸ್ ಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಪರಶುರಾಮ್ ಶೇರಖಾನೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಗಣತಿದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದರು.

ಒಟ್ಟಾರೆಯಾಗಿ, ಈ ಮೂರು ದಿನಗಳ ತರಬೇತಿ ಗಣತಿದಾರರಿಗೆ ಕಾರ್ಯನಿರ್ವಹಣೆಯ ಕುರಿತ ಸ್ಪಷ್ಟತೆ ನೀಡುವುದರ ಜೊತೆಗೆ, ಜನಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಅಗತ್ಯವಾದ ಆತ್ಮವಿಶ್ವಾಸವನ್ನು ತುಂಬಿತು.



ಗದಗನ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ಯಲ್ಲಿ ಸ್ಥಳೀಯ ಅಲ್ಪಸಂಖ್ಯಾತರ ಕುಂದುಕೊರತೆ ವಿಚಾರಣೆ ಮತ್ತು ಅಲ್ಪಸಂಖ್ಯಾತ ಮಹಿಳೆಯರು ಮತ್ತು ಸ್ಥಳೀಯ ಮಹಿಳಾ ಅಧಿಕಾರೇತರ ಸಂಸ್ಥೆಗಳಿಗೆ ಸಾಕ್ಷರತೆಯನ್ನು ಪ್ರೇರೇಪಿಸಲು ಜಾಗೃತಿ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮದ್ ಅವರು ಅಲ್ಪಸಂಖ್ಯಾತರ ಕುಂದುಕೊರತೆ ವಿಚಾರಿಸಿ ಅಹವಾಲು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ವಕ್ಫ ಬೋರ್ಡದ ಕೌಸಿಫ್ ಮಕಾನದಾರ, ಮುಜಾಬುಲ್ಲಾ ಜಾಫರ್ ಇತರರಿದ್ದರು.



ಹುಬ್ಬಳ್ಳಿ : ಬಸವ ಪರಿಸರ ಸಂರಕ್ಷಣಾ ಸಮಿತಿಯ ಅಧ್ಯಕ್ಷ, ಸಾಹಿತಿ ಪ್ರೊ ಎಸ್.ವಿ.ಪಟ್ಟಣಶೆಟ್ಟಿ ಅವರ 84ನೇ ಜನ್ಮದಿನೋತ್ಸವ ಶುಭ ಸಂದರ್ಭದಲ್ಲಿ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಮಾಲಾರ್ಪಣೆ, ಗ್ರಂಥ ನೀಡಿ ಆತ್ಮೀಯವಾಗಿ ಹುಟ್ಟು ಹಬ್ಬದ ಶುಭ ಕೋರಿದರು. ಹುತ್ಪೂರ್ವಕವಾಗಿ ಅಭಿನಂದಿಸಿದರು. ದೇವರು ಪ್ರೊ ಪಟ್ಟಣಶೆಟ್ಟಿ ಅವರಿಗೆ ಉತ್ತಮ ಆರೋಗ್ಯ ಭಾಗ್ಯ ನೀಡಿ ಕರುಣಿಸಲಿ ಎಂದು ಪ್ರಾರ್ಥಿಸಿದ್ದಾರೆ. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ ಪ್ರೊ ಎಸ್.ಎಂ.ಸಾತ್ಮಾರ, ಚನ್ನಬಸಪ್ಪ ಧಾರವಾಡಶೆಟ್ಟರ್, ಡಾ ಸರ್ವಮಂಗಳಾ ಕುದರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಶಿವಪ್ರಸಾದ್ ಸಬರದ, ಪ್ರೊ ನಾಗವೇಣಿ, ಪ್ರತಿಭಾ ಪಟ್ಟಣಶೆಟ್ಟಿ , ಸೌಜನ್ಯ ಸಬರದ, ಸಮರ್ಥ ಹರಿಹರ , ಗಿರೀಶ್ ಪಟ್ಟಣಶೆಟ್ಟಿ, ಭರತ್, ಪ್ರಣವ, ಪ್ರಿಯಾ ಬಗಲಿ, ಮುಂತಾದವರು ಇದ್ದರು.

# ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ನಿಮಿತ್ಯ ಪೂರ್ವಸಿದ್ಧತಾ ಸಭೆ

## ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಿ : ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್

**ಬೆಳಗಾವಿ ವಾರ್ತೆ ಗದಗ:** ಜಗದ್ಗುರು ಶ್ರೀ ಶಂಕರಾ ಚಾರ್ಯರ ಜಯಂತಿಯನ್ನು ಏಪ್ರಿಲ್ 21 ರಂದು ನಗರದ ಶ್ರೀ ಶಂಕರಾ ಚಾರ್ಯರ ಮಠದಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಶ್ರೀ ಶಂಕರಾಚಾರ್ಯರ ಜಯಂತಿ ನಿಮಿತ್ತ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಮುದ್ರಣಕ್ಕೆ ಕ್ರಮ ವಹಿಸಬೇಕು. ಎಸ್.ಎಸ್.ಎಲ್.ಸಿ, ಪಿ.ಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಸಮಾಜದ ಹಿರಿಯರಿಗೆ ಸನ್ಮಾನ ಕಾರ್ಯಕ್ರಮವು ಜಯಂತಿ ದಿನದಂದು ಜರುಗಲಿದೆ. ಜಗದ್ಗುರು ಶಂಕರಾಚಾರ್ಯರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮವು ಜರುಗುವುದು. ಒಟ್ಟಾರೆಯಾಗಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಊಟೋಪಹಾರದ ವ್ಯವಸ್ಥೆ, ವೇದಿಕೆ ವ್ಯವಸ್ಥೆ, ಸ್ಪರ್ಧೆಗಳ ಆಯೋಜನೆ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ



ಅಧಿಕಾರಿ ಎಂ.ಎಂ.ತುಂಬರಮಟ್ಟಿ, ರತ್ನಾಕರ್‌ಭಟ್ ಜೋಶಿ, ಶ್ರೀನಿವಾಸ ಹುಯಿಲಗೋಳ ಪ್ರೊ. ಅನಿಲ ವೈದ್ಯ, ಪ್ರೊ.ದತ್ತಪ್ರಸನ್ನ ಪಾಟೀಲ, ಗಿರೀಶ ಪಂತರ, ರವೀಂದ್ರ ಜೋಶಿ, ಪ್ರಾಣೇಶ ಕುಲಕರ್ಣಿ, ರವಿ ಪೂಜಾರ, ಅನಿಲ ತೆಂಬದಮನಿ, ದತ್ತಂಭಟ್ ತೆಂಬದಮನಿ, ದತ್ತಣ್ಣ ಜೋಶಿ, ನಾಗರಾಜ ಕುಲಕರ್ಣಿ, ಪ್ರಶಾಂತ ಪಾಟೀಲ, ಶ್ರೀಮತಿ ಸುಮನ್ ಪಾಟೀಲ, ಹೇಮಂತ ಕುಲಕರ್ಣಿ, ಶ್ರೀಮತಿ ಕಲಾವತಿ ಅಲಗೂರ ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು.

# ಧಾರವಾಡ: ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅಂತಿಮ ತೀರ್ಪು ಮುಂದೂಡಿಕೆ

ಧಾರವಾಡ : ಕಳೆದ ಎಂಟು ವರ್ಷಗಳಿಂದ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ್ದ ಜಿಪಂ ಮಾಜಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಮಹತ್ವದ ತೀರ್ಪು ಮತ್ತೊಮ್ಮೆ ಮುಂದೂಡಿಕೆಯಾಗಿದೆ.

ಗುರುವಾರ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅಂತಿಮ ತೀರ್ಪು ಪ್ರಕಟಿಸಲಿದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ ಕೊನೆ ಕ್ಷಣದಲ್ಲಿ ನ್ಯಾಯಾಲಯವು ತೀರ್ಪನ್ನು ಏಪ್ರಿಲ್ 15ಕ್ಕೆ ಮುಂದೂಡಿದೆ.

**ಪ್ರಕರಣದ ಹಿನ್ನೆಲೆ :** 2016ರ ಜೂನ್ 15ರಂದು ಯೋಗೇಶ್ ಗೌಡ ಅವರನ್ನು ಧಾರವಾಡದಲ್ಲಿ ಭೀಕರವಾಗಿ ಕೊಚ್ಚಿ ಹತ್ಯೆ ಮಾಡಲಾಗಿತ್ತು. ಪ್ರಾಥಮಿಕ ತನಿಖೆಯಲ್ಲಿ ಆಸ್ತಿ ವಿವಾದವೇ ಕೊಲೆಗೆ ಕಾರಣ ಎಂದು ಶಂಕಿಸಿ ಆರು ಮಂದಿಯ ವಿರುದ್ಧ ಪ್ರಕರಣ ದಾಖಲಾಗಿತ್ತು.

ಆದರೆ, ಕುಟುಂಬದ ಒತ್ತಾಯದ ಮೇರೆಗೆ 2019ರ ಸೆಪ್ಟೆಂಬರ್‌ನಲ್ಲಿ ಪ್ರಕ ರಣವನ್ನು ಸಿಬಿಐಗೆ ಹಸ್ತಾಂತರಿಸ ಲಾಯಿತು.

**ಸಿಬಿಐ ತನಿಖೆ ಮತ್ತು ಆರೋಪಗಳು :** ಸಿಬಿಐ ತನಿಖೆಯಲ್ಲಿ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದ್ದು, ಇದು ರಾಜಕೀಯ ಪ್ರೇರಿತ ಕೊಲೆ ಎಂಬ ಅಂಶ ಬಹಿರಂಗವಾಗಿದೆ. ಈ ಪ್ರಕರಣದಲ್ಲಿ ಮಾಜಿ ಸಚಿವ ಹಾಗೂ ಶಾಸಕ ವಿನಯ್ ಕುಲಕರ್ಣಿ ಅವರನ್ನು 2020ರ ನವೆಂಬರ್ 5ರಂದು ಸಿಬಿಐ ಬಂಧಿಸಿತ್ತು. ನಂತರ ತನಿಖೆ ಪೂರ್ಣಗೊಳಿಸಿ ಒಟ್ಟು 21 ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಪಟ್ಟಿ ಸಲ್ಲಿಸಲಾಗಿತ್ತು.

ಪ್ರಸ್ತುತ, ಪ್ರಮುಖ ಆರೋಪಿ ವಿನಯ್ ಕುಲಕರ್ಣಿ ಜಾಮೀನಿನ ಮೇಲೆ ಹೊರಗಿದ್ದಾರೆ.

# ಉತ್ತಮ ಆರೋಗ್ಯಕ್ಕೆ ಶ್ರಮದಾನ ಅವಶ್ಯ: ಡಾ॥ ನಾಲಬಂದ



**ಬೆಳಗಾವಿ ವಾರ್ತೆ ತಾಳಿಕೋಟೆ:** ಮನುಷ್ಯನ ಉತ್ತಮ ಆರೋಗ್ಯಕ್ಕೆ ಉತ್ತಮ ಆಹಾರ ಸೇವನೆ ಎಷ್ಟು ಮುಖ್ಯವೋ ಅದರ ತಕ್ಕಂತೆ ಮನುಷ್ಯನಲ್ಲಿ ಯೋಗಾಸನದಂತಹ ವಿವಿಧ ರೀತಿಯ ಶ್ರಮದಾನವೂ ಅಷ್ಟೇ ಮುಖ್ಯವಾಗಿದೆ ಎಂದು ಖ್ಯಾತ ವೈಧ್ಯರಾದ ಡಾ.ಎ.ಎ.ನಾಲಬಂದ ಅವರು ಹೇಳಿದರು.

ಬುಧವಾರರಂದು ಪಟ್ಟಣದ ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಆಶ್ರಯ ಕಾಲೋನಿಯಲ್ಲಿ ಆಯೋಜಿಸಲಾದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ವಿಶೇಷ ಶಿಬಿರದ 3ನೇ ದಿನದಂದು ನಡೆದ ಆರೋಗ್ಯವೇ ಭಾಗ್ಯ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಆಗಮಿಸಿ ಮಾತನಾಡುತ್ತಿದ್ದ ಅವರು ಉತ್ತಮ ಆರೋಗ್ಯಕ್ಕಾಗಿ ಬ್ರಾಹ್ಮಿ ಮುಹೂರ್ತದಲ್ಲಿ ಎದ್ದು ಕಾಲ್ನಡಿಗೆ, ಯೋಗಾಸನಗಳನ್ನು ಮಾಡುವುದು ಅಗತ್ಯವಾಗಿದೆ ಮನುಷ್ಯನಿಗೆ ಸರಿಯಾದ ನಿದ್ರೆ, ಶುದ್ಧ ಆಹಾರ ಸೇವನೆ, ಯಥೇಚ್ಛ ನೀರು ಸೇವನೆ ಮತ್ತು ಮಾನಸಿಕ ನೆಮ್ಮದಿ ಇವು ಉತ್ತಮ ಆರೋಗ್ಯಕ್ಕೆ ಅಗತ್ಯವೆಂದು ತಿಳಿಸಿದ ಅವರು ಮಾನಸಿಕ ಒತ್ತಡವನ್ನು ದೂರ ವಿಟ್ಟು ಸರಿಯಾದ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಇದರಿಂದ ಆರೋಗ್ಯವಂತರಾಗಿ ಬಾಳಲು ಸಾಧ್ಯವಾಗಲಿದೆ ಎಂದರು.

ಕಾರ್ಯಕ್ರಮದ ಮಾರ್ಗದರ್ಶಕರು ಹಾಗೂ ಉಪನ್ಯಾಸಕರಾದ ವಾಯ್.ಎಚ್. ಅಂಗಡಗೇರಿ ಅವರು, ಸಮತೋಲನ ಆಹಾರದಿಂದ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಮನುಷ್ಯನು ನಿತ್ಯ ಕಾಲ್ನಡಿಗೆಯಿಂದ ನಡೆಯುವ ರೂಡಿಯನ್ನು ಹೆಚ್ಚಿಸಿಕೊಳ್ಳಬೇಕು ಇದರಿಂದ ದೇಹದಲ್ಲಿ ಸಮತೋಲನೆ ಕಾಪಾಡಿಕೊಳ್ಳಲು ಸಾದ್ಯವಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಆರ್.ಎಂ. ಬಂಟನೂರ ಅವರು ಮಾತನಾಡಿ, ಆರೋಗ್ಯದ ಬಗ್ಗೆ ಅಲಕ್ಷ ತೋರಬಾರದು. ದೈಹಿಕ ಮತ್ತು ಮಾನಸಿಕ ಆರೋಗ್ಯ ಎರಡಕ್ಕೂ ಸಮಾನ ಪ್ರಾಮುಖ್ಯತೆ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೀ.ವಿ.ಸಂಘದ ಉಪಾದ್ಯಕ್ಷ ಹಾಗೂ ಎಸ್.ಕೆ. ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷರಾದ ಕೆ.ಎಸ್ ಮುರಾಳ ಮತ್ತು ಸಹ ಕಾರ್ಯದರ್ಶಿಗಳಾದ ಎಂ.ಎಸ್. ಸರಶೆಟ್ಟಿ ಶಂಕರಗೌಡ ಹಿಪ್ಪರಗಿ ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ಹಮ್ಮಿಕೊಳ್ಳಲಾಯಿತು. ಶಿಬಿರದ ಅಂಗವಾ ಗಿ ಮುಂಜಾನೆ ಎನ್.ಎಸ್.ಎಸ್ ಗೀತೆಯ ಗಾಯನ ಹಾಗೂ ಯೋಗಾಭ್ಯಾಸ ನಡೆಸ'ಲಾಯಿತು. ಬಳಿಕ ವಿದ್ಯಾರ್ಥಿಗಳು ನಗ ರದ ಪೊಲೀಸ್ ಸ್ಟೇಷನ್ ಆವರಣವನ್ನು ಸ್ವಚ್ಛಗೊಳಿಸುವ ಮೂಲಕ ಶ್ರಮದಾನದಲ್ಲಿ ತೊಡಗಿಸಿಕೊಂಡರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿಗಳಾದ ಎ.ಎ. ಗಂಗನಗೌಡ ಹಾಗೂ ಎನ್.ಎಸ್. ಎಸ್ ಶಿಬಿರಾರ್ಥಿಗಳು ಮತ್ತು ಮಹಾವಿದ್ಯಾಲ ಯದ ಸರ್ವ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001